ಕನ್ನಡಪ್ರಭ
ಶುಕ್ರವಾರ 8.05.2026

ಕ್ಷೇತ್ರಕ್ಕೆ ಸುಮಾರು 8 ಕೆಪಿಎಸ್ ಶಾಲೆ ತರಲಾಗಿದೆ. ಈಗಾಗಲೇ ಹಿಟ್ನಾಳ, ಹೊಸಳ್ಳಿ, ಹೊಸ ಬಂಡಿಹರ್ಲಾಪುರ ಗ್ರಾಮಗಳಲ್ಲಿ ಶಾಲಾ ನಿರ್ಮಾಣದ ಕಾಮಗಾರಿಗೆ ಅಡಿಗಲ್ಲು ನೆರವೇರಿಸಿದ್ದೇವೆ. ಇದರಿಂದ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲ ಆಗಲಿದೆ.

• **ರಾಘವೇಂದ್ರ ಹಿಟ್ನಾಳ,** ಶಾಸಕ

ಸುದ್ದಿ ಸಿಂಚನ

12ರಿಂದ ಡಿಇಎಲ್‌ಇಡಿ ಪರೀಕ್ಷೆ: ನಿಷೇಧಾಜ್ಞೆ ಜಾರಿ

ಕೊಪ್ಪಳ: ಜಿಲ್ಲೆಯಲ್ಲಿ ಮೇ 12ರಿಂದ ಮೇ 18 ವರೆಗೆ ಡಿಇಎಲ್.ಇಡಿ ಪರೀಕ್ಷೆಗಳು ನಡೆಯಲಿದ್ದು, ಈ ಪರೀಕ್ಷೆ ಸುಗಮ ಹಾಗೂ ಶಾಂತಿಯುತವಾಗಿ ನಡೆಯುವ ಉದ್ದೇಶದಿಂದ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್‌ವ್ಯಾಪ್ತಿ ಪ್ರದೇಶದಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023ರ ಕಲಂ 163 ಅನ್ವಯ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ಸುರೇಶ ಬಿ. ಇಟ್ನಾಳ ಆದೇಶ ಹೊರಡಿಸಿದ್ದಾರೆ. ಜಿಲ್ಲೆಯ ಮುನಿರಾಬಾದ ಡಯಟ್‌ನ ಪಿ.ಎಸ್.ಟಿ.ಇ ವಿಭಾಗದ ಪರೀಕ್ಷಾ ಕೇಂದ್ರದಲ್ಲಿ ನಿಗದಿತ ದಿನಾಂಕಗಳಂದು ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 1ಗಂಟೆಯವರೆಗೆ ಹಾಗೂ ಮಧ್ಯಾಹ್ನ 2 ಗಂಟೆಯಿಂದ ಸಂಜೆ 5 ಗಂಟೆವರೆಗೆ ಪರೀಕ್ಷೆಗಳು ನಡೆಯಲಿವೆ. ನಿಷೇಧಾಜ್ಞೆ ಆದೇಶದನ್ವಯ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್‌ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ., ಮೊಬೈಲ್, ಪೇಜರ್, ಝರಾಕ್ಸ್, ಟೈಪಿಂಗ್ ಮುಂತಾದವುಗಳನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಹಾಗೂ ನಿಯೋಜಿತ ಶಿಕ್ಷಕರನ್ನು, ಜಾಗೃತ ದಳದವರನ್ನು ಹೊರತುಪಡಿಸಿ ಇನ್ನುಳಿದವರಿಗೆ ಪರವಾನಗಿ ಇಲ್ಲದೆ ಪರೀಕ್ಷಾ ಕೇಂದ್ರಗಳಲ್ಲಿ ಪ್ರವೇಶ ಮಾಡುವುದನ್ನು ನಿಷೇಧಿಸಿದೆ. ಪರೀಕ್ಷಾ ಕೇಂದ್ರಗಳ ಸುತ್ತಲೂ ಜನರು ಮಾರಕಾಸ್ತ್ರ ಹಿಡಿದು ತಿರುಗಾಡುವುದನ್ನು ನಿಷೇಧಿಸಿದೆ. ಈ ಆದೇಶವು ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಅನ್ವಯವಾಗುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

■ ಮದುವೆ, ಶವ ಸಂಸ್ಕಾರ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಅನ್ವಯ ವಾಗುವುದಿಲ್ಲ

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಯಲಬುರ್ಗಾ: ರಾಜ್ಯ ಸರ್ಕಾರಿ ನೌಕರರ ಕೇಂದ್ರ ಸಂಘದಿಂದ 2026ನೇ ಸಾಲಿನ ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ.90ಕ್ಕೂ ಅಧಿಕ ಅಂಕ ಗಳಿಸಿದ ರಾಜ್ಯ ಸರ್ಕಾರಿ ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಸರ್ಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ಸಿದ್ದಲಿಂಗಪ್ಪ ಶ್ಯಾಗೋಟಿ ತಿಳಿಸಿದ್ದಾರೆ. ಸಿ.ಎಸ್. ಷಡಾಕ್ಷರಿ ಸಂಘದ ರಾಜ್ಯಾಧ್ಯಕ್ಷರಾದ ನಂತರ ಪ್ರತಿ ವರ್ಷ ಸುಮಾರು ಹತ್ತು ಸಾವಿರ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಗುತ್ತಿದ್ದು, ಪ್ರಸಕ್ತ ಸಾಲಿನಲ್ಲಿ ಅರ್ಜಿ ಸಲ್ಲಿಸಲು ಮೇ 25 ಕೊನೆಯ ದಿನವಾಗಿದೆ. https://powermedia.info ಲಿಂಕ್ ಮೂಲಕ ನಿಗದಿತ ದಿನಾಂಕದೊಳಗೆ ಅರ್ಜಿ ಸಲ್ಲಿಸಬೇಕೆಂದು ಸಿದ್ದಲಿಂಗಪ್ಪ ಶ್ಯಾಗೋಟಿ ತಿಳಿಸಿದ್ದಾರೆ.



ಕುಷ್ಟಗಿ ತಾಲೂಕಿನ ದೋಟಿಹಾಳ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಆವರಣದಲ್ಲಿ ಶ್ರೀ ಮಣಿಕಂಠ ಕ್ರಿಕೆಟ್ ಕ್ಲಬ್ ವತಿಯಿಂದ ನಡೆದ ಹಾರ್ಡ್ ಟೆನ್ನಿಸ್ ಓಪನ್ ಕ್ರಿಕೆಟ್ ಟೂರ್ನಾಮೆಂಟ್ ಉದ್ಘಾಟಿಸಲಾಯಿತು.



ಹನುಮಸಾಗರದ ಗ್ರಾಮದೇವತೆ ದ್ಯಾಮಾಂಬಿಕ ದೇವಿಗೆ ಮೆರವಣಿಗೆಯ ಮೂಲಕ ಉಡಿ ತುಂಬಲಾಯಿತು. ಈ ಸಂದರ್ಭದಲ್ಲಿ ಡೊಳ್ಳು ಕುಣಿತ, ಕರಡಿ ಮಜಲು ನೋಡುಗರ ಗಮನ ಸೆಳೆಯಿತು.



ಕೊಪ್ಪಳದಲ್ಲಿ ಗುರುವಾರ ಅಖಿಲ ಕರ್ನಾಟಕ ಬ್ರಾಹ್ಮಣ ಮಹಸಭಾ ಜಿಲ್ಲಾ ಘಟಕದ ಪದಾಧಿಕಾರಿಗಳು ಜಿಲ್ಲಾಧಿಕಾರಿ ಸುರೇಶ ಇಟ್ನಾಳಗೆ ಮನವಿ ಸಲ್ಲಿಸಿದರು. ಸಮುದಾಯದ ಮುಖಂಡ ಕೆ.ಜಿ. ಕುಲಕರ್ಣಿ, ವೇಣುಗೋಪಾಲ ಆಚಾರ್ ಜಹಗೀರದಾರ್ ಇದ್ದರು.

ಡೊನೇಷನ್ ಹಾವಳಿಗೆ ಕಡಿವಾಣ ಹಾಕುವಂತೆ ಆಗ್ರಹ

ಎಸ್‌ಎಫ್‌ಐದಿಂದ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಮನವಿ ಸಲ್ಲಿಕೆ | ಪ್ರತಿ ತಿಂಗಳು ಪಾಲಕರ ಸಭೆ ಕರೆಯುವಂತೆ ಒತ್ತಾಯ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಡೊನೇಷನ್ ಹಾವಳಿಗೆ ಕಡಿವಾಣ ಹಾಕುವಂತೆ ಮತ್ತು ವಂತಿಗೆ ವಸೂಲಿ ಮಾಡುತ್ತಿರುವ ಶಿಕ್ಷಣ ಸಂಸ್ಥೆಗಳ ಮೇಲೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಎಸ್‌ಎಫ್‌ಐ ಸಂಘಟನೆ ಮುಖಂಡರು ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಮನವಿ ಸಲ್ಲಿಸಿ ಆಗ್ರಹಿಸಿದರು.

2026-27ನೇ ಸಾಲಿನಲ್ಲಿ ರಾಜ್ಯಾದ್ಯಂತ ಕೆಲವು ಖಾಸಗಿ ಶಿಕ್ಷಣ ಸಂಸ್ಥೆಗಳು ಈಗಾಗಲೇ ಪ್ರವೇಶಾತಿ ಪ್ರಕ್ರಿಯೆ ಮುಕ್ತಾಯಗೊಳಿಸಿದ್ದು, ಈ ಸಂದರ್ಭದಲ್ಲಿ ಜಿಲ್ಲಾ ಶಿಕ್ಷಣ ಪ್ರಾಧಿಕಾರ ಸಭೆ ಸೇರಿ ಖಾಸಗಿ ಶಾಲೆಗಳ ಡೊನೇಷನ್ ಹಾವಳಿ ಕುರಿತು ಪಾಲಕರಿಗೆ ಮಾಹಿತಿ ನೀಡಬೇಕಾಗಿತ್ತು. ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿರುವ ಸಮಿತಿಯು ಸಭೆ ಸೇರಿ ಖಾಸಗಿ ಶಾಲೆಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡದಿರುವ ಕಾರಣ 1983ರ ಶಿಕ್ಷಣ ಕಾಯ್ದೆ ಮತ್ತು 2009ರ ಆರ್.ಟಿ.ಇ ಕಾಯ್ದೆ ಸಂಪೂರ್ಣವಾಗಿ ಉಲ್ಲಂಘನೆ ಮಾಡುವುದರ ಮೂಲಕ ಹಗಲು ದರೋಡೆ ಮಾಡುತ್ತಿದ್ದಾರೆ ಎಂದು ದೂರಿದ್ದಾರೆ.

ಅಣಬೆಗಳಂತೆ ಖಾಸಗಿ ಶಾಲೆಗಳು ತಲೆ ಎತ್ತುತ್ತಿದ್ದು, ಮತ್ತೊಂದೆಡೆ ರಾಜ್ಯದಲ್ಲಿ ಸರ್ಕಾರಿ ಕನ್ನಡ ಮಾಧ್ಯಮ ಶಾಲೆಗಳು ಮುಚ್ಚುತ್ತಿವೆ. ಈಗಾಗಲೆ ಖಾಸಗಿ ಶಾಲೆಗಳಲ್ಲಿ ದಾಖಲಾತಿ ಹೆಸರಲ್ಲಿ ಡೊನೇಷನ್ ಹಣ ಮನಬಂದಂತೆ ವಸೂಲಿ ಮಾಡಲು ಮುಂದಾಗಿದ್ದಾರೆ. ಬಡ ಹಿಂದುಳಿದ, ದಲಿತ ಅಲ್ಪಸಂಖ್ಯಾತರ ಮಕ್ಕಳು ಖಾಸಗಿ ಶಾಲೆಗಳಲ್ಲಿ ಡೊನೇಷನ್ ಪಿಡುಗಿನಿಂದ ಶಾಲೆಗಳಲ್ಲಿ ಓದುವುದು ಅಸಾಧ್ಯವಾಗುತ್ತಿದೆ. ಶಿಕ್ಷಣ ಹಕ್ಕು ಕಾಯ್ದೆ-1983 ಮತ್ತು 2009ರ ಆರ್.ಟಿ.ಇ ಕಾಯ್ದೆ ಜಾರಿಯಾದರೂ ಸಮರ್ಪಕವಾಗಿ ಪಾಲನೆಯಾಗುತ್ತಿಲ್ಲ. ಬಹುತೇಕ ಖಾಸಗಿ ಶಾಲೆಗಳಲ್ಲಿ ಲಕ್ಷಾಂತರ ರೂಪಾಯಿಗಳವರೆಗೂ ಹಣ ವಸೂಲಿ ಮಾಡುವುದರ ಮೂಲಕ ಹಗಲು ದರೋಡೆ ಮಾಡುತ್ತಿದ್ದಾರೆ.

ಡೊನೇಷನ್ ನಿಯಂತ್ರಣಕ್ಕೆ ಜಿಲ್ಲಾ ಶಿಕ್ಷಣ ರೆಗ್ಯುಲೇಟಿಂಗ ಪ್ರಾಧಿಕಾರ (ಡೊನೇಷನ್ ವಿರೋಧಿ ಸಮಿತಿ) ತಕ್ಷಣ ರಚಿಸಬೇಕು. ವಂತಿಗೆ ವಸೂಲಿ ಮಾಡುತ್ತಿರುವ ಶಿಕ್ಷಣ ಸಂಸ್ಥೆಗಳ ಮೇಲೆ ಕ್ರಮ ಕೈಗೊಳ್ಳಬೇಕು. ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಜಿಲ್ಲಾಧಿಕಾರಿ ಮತ್ತು ತಹಸೀಲ್ದಾರ ನೇತೃತ್ವದಲ್ಲಿ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರು ಮತ್ತು ಶಿಕ್ಷಣ ಇಲಾಖೆಯ ಮುಖ್ಯಸ್ಥರು, ಪಾಲಕರು, ವಿದ್ಯಾರ್ಥಿ ಸಂಘಟನೆಯ ಪ್ರತಿನಿಧಿಗಳ ಜಂಟಿ ಸಭೆ ಕರೆಯಬೇಕು. ಖಾಸಗಿ ಶಿಕ್ಷಣ ಸಂಸ್ಥೆ ನಿಯಂತ್ರಿಸಲು ರಾಜ್ಯ ಸರ್ಕಾರಕ್ಕೆ ಅಧಿಕಾರವಿರುವ ಕೇಂದ್ರೀಯ ಶಾಸನ ಜಾರಿಗೆ ತರಬೇಕು. ಸರ್ಕಾರ ನಿಗದಿಗೊಳಿಸಿರುವ ಪ್ರವೇಶ ಶುಲ್ಕದ ವಿವರ ಮಾಧ್ಯಮಗಳ ಮೂಲಕ ಮತ್ತು ಭಿತ್ತಿ ಪತ್ರ. ಕರಪತ್ರಗಳ ಮೂಲಕ ಪ್ರಚಾರ ಪಡಿಸಬೇಕು. ಶಿಕ್ಷಣ ಸಂಸ್ಥೆಗಳು ಪ್ರತಿ ತಿಂಗಳಿಗೊಮ್ಮೆ ಪಾಲಕರ ಸಭೆ ಕರೆದು ವಿದ್ಯಾರ್ಥಿಗಳು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಚರ್ಚಿಸುವಂತೆ ನಿರ್ದೇಶಿಸಬೇಕು. ಜಿಲ್ಲಾಧಿಕಾರಿಗಳು ಡೊನೇಷನ್ ನಿಯಂತ್ರಣಕ್ಕೆ ಜಿಲ್ಲಾ ಶಿಕ್ಷಣ ರೆಗ್ಯುಲೇಟಿಂಗ್ ಪ್ರಾಧಿಕಾರ ರಚನೆ ಕುರಿತು 15 ದಿನಗಳ ಒಳಗಾಗಿ ಪಾಲಕರು ಶಿಕ್ಷಣ ಸಂಸ್ಥೆಯ ಮುಖ್ಯಸ್ಥರು. ಶಿಕ್ಷಣ ಇಲಾಖೆಯ ಮುಖ್ಯಸ್ಥರು, ವಿದ್ಯಾರ್ಥಿ ಸಂಘಟನೆಯ ಪ್ರತಿನಿಧಿಗಳ ಜಂಟಿಸಭೆ ಕರೆಯಬೇಕು. ಕ್ಷೇತ್ರ ಶಿಕ್ಷಣಾಧಿಕಾರಿಗಳು ನಿಗದಿಪಡಿಸಿದ ಶುಲ್ಕದ ವಿವರಗಳನ್ನು ಶಾಲಾ- ಕಾಲೇಜುಗಳ ಮುಂದೆ ಖಾಸಗಿ ಶಿಕ್ಷಣ ಸಂಸ್ಥೆಗಳು ಪ್ರದರ್ಶಿಸಬೇಕು. ನಿಯಮ ಮೀರಿ ಡೊನೇಷನ್ ಪಡೆದ ಖಾಸಗಿ ಶಿಕ್ಷಣ ಸಂಸ್ಥೆಗೆ ಶಿಕ್ಷಣ ಹಕ್ಕು ಕಾಯ್ದೆಯ ಪ್ರಕಾರ ದಂಡ ಮತ್ತು ಶಿಕ್ಷೆಗೊಳಪಡಿಸಬೇಕು ಎಂಬುದು ಸೇರಿದಂತೆ ಇನ್ನಿತರ ಬೇಡಿಕೆ ಈಡೇರಿಸುವಂತೆ ಮನವಿ ಸಲ್ಲಿಸಿ ಮುಖಂಡರು ಆಗ್ರಹಿಸಿದ್ದಾರೆ.



ಡೊನೇಷನ್ ಹಾವಳಿಗೆ ಕಡಿವಾಣ ಹಾಕುವಂತೆ ಮತ್ತು ವಂತಿಗೆ ವಸೂಲಿ ಮಾಡುತ್ತಿರುವ ಶಿಕ್ಷಣ ಸಂಸ್ಥೆಗಳ ಮೇಲೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಎಸ್‌ಎಫ್‌ಐ ಸಂಘಟನೆ ಮುಖಂಡರು ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಮಿತಿ ಮೀರಿ ಡೊನೇಷನ್ ವಸೂಲಿ, ಪ್ರತಿಭಟನೆ



ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಮಿತಿ ಮೀರಿ ಡೊನೇಷನ್ ವಸೂಲಿ ಮಾಡುತ್ತಿರುವದನ್ನು ಖಂಡಿಸಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಮುಂದೆ ಎಸ್‌ಎಫ್‌ಐ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

• **ಕನ್ನಡಪ್ರಭ ವಾರ್ತೆ** ಗಂಗಾವತಿ

ನಗರ ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿರುವ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಮಿತಿಮೀರಿ ಡೊನೇಷನ್ ವಸೂಲಿ ಮಾಡುತ್ತಿರುವದನ್ನು ಖಂಡಿಸಿ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಮುಂದೆ ಎಸ್ ಎಫ್ ಐ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಈ ವೇಳೆ ಜಿಲ್ಲಾ ಕಾರ್ಯದರ್ಶಿ ಬಾಲಾಜಿ ಚಳ್ಳಾರಿ ಮಾತನಾಡಿ, ಡೊನೇಷನ್ ಹಾವಳಿ ವಿರೋಧಿಸಿ, ಜಿಲ್ಲಾ ಶಿಕ್ಷಣ ರೆಗ್ಯುಲೇಟಿಂಗ ಪ್ರಾಧಿಕಾ ರವನ್ನು ರಚಿಸುವಂತೆ ವಂತಿಗೆ ವಸೂಲಿ ಮಾಡುತ್ತಿರುವ ಶಿಕ್ಷಣ ಸಂಸ್ಥೆಗಳ ಮೇಲೆ ಕ್ರಮಕೈಗೊಳ್ಳಲು ಆಗ್ರಹಿಸಿ ಹೋರಾಟ ನಡೆಸುತ್ತಿದ್ದು,

2026-27ನೇ ಸಾಲಿನಲ್ಲಿ ರಾಜ್ಯಾದ್ಯಂತ ಕೆಲವು ಖಾಸಗಿ ಶಿಕ್ಷಣ ಸಂಸ್ಥೆಗಳು ಈಗಾಗಲೇ ಪ್ರವೇಶಾತಿ ಪ್ರಕ್ರಿಯೆ ಮುಕ್ತಾಯಗೊಳಿಸಿದ್ದು, ಈ ಸಂದರ್ಭದಲ್ಲಿ ಜಿಲ್ಲಾ ಶಿಕ್ಷಣ ಪ್ರಾಧಿಕಾರ ಸಭೆ ಸೇರಿ ಖಾಸಗಿ ಶಾಲೆಗಳ ಡೋನೇಷನ್ ಹಾವಳಿ ಕುರಿತು ಪಾಲಕರಿಗೆ ಮಾಹಿತಿ ನೀಡಬೇಕಾಗಿತ್ತು. ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯು ಸಭೆ ಸೇರಿ ಖಾಸಗಿ ಶಾಲೆಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡದಿರುವ ಕಾರಣ 1983ರ ಶಿಕ್ಷಣ ಕಾಯ್ದೆ ಮತ್ತು 2009ರ ಆರ್.ಟಿ.ಇ ಕಾಯ್ದೆ ಸಂಪೂರ್ಣವಾಗಿ ಉಲ್ಲಂಘನೆ ಮಾಡುವುದರ ಮೂಲಕ ಹಗಲು ದರೋಡೆ ಮಾಡಿರುತ್ತಾರೆ ಎಂದು ದೂರಿದರು. ಈವೇಳೆ ತಾಲೂಕಾಧ್ಯಕ್ಷ ನಾಗರಾಜ್, ಕೃಷಿಕೂಲಿಕಾರ ಸಂಘಟನೆಯ ಜಿಲ್ಲಾ ಜಂಟಿ ಕಾರ್ಯದರ್ಶಿ ಬಾಳಪ್ಪ ಹುಲಿಹೈದರ್, ಎಸ್ ಎಫ್‌ಐ ಜಂಟಿ ಕಾರ್ಯದರ್ಶಿ ಬಸಯ್ಯ, ಸದಸ್ಯರಾದ ಶರಣಬಸವ ಬಾದ್ನಟ್ಟಿ, ದೊಡ್ಡಬಸವ, ಯಂಕಣ್ಣ, ಅಲ್ತಾಫ್, ಕಾರ್ತಿಕ್ ಇದ್ದರು.

ಈ ಸಂದರ್ಭದಲ್ಲಿ ಎಸ್‌ಎಫ್‌ಐ ರಾಜ್ಯ ಉಪಾಧ್ಯಕ್ಷ ಗ್ಯಾನೇಶ್ ಕಡಗದ, ಜಿಲ್ಲಾ ಮುಖಂಡ ಯಮನೂರ, ಸಮೀರ್. ನಾಗರಾಜ್, ಮೌನೇಶ್, ವೆಂಕಟೇಶ್. ದೇವರಾಜ್ ಉಪಸ್ಥಿತರಿದ್ದರು.

ಬ್ರಾಹ್ಮಣ ಮಹಾಸಭಾದಿಂದ ಮನವಿ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಸಿಇಟಿ ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳ ಮೇಲಿದ್ದ ಜನಿವಾರ ತಗಿಸಿ ಕತ್ತರಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಹಾಗೂ ಘಟನೆ ನಡೆದ ಎರಡು ಶಿಕ್ಷಣ ಸಂಸ್ಥೆಗಳ ಅನುಮತಿ ರದ್ದು ಮಾಡಬೇಕು ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಜಿಲ್ಲಾ ಘಟಕ ಆಗ್ರಹಿಸಿದೆ.

ಘಟಕದ ಪದಾಧಿಕಾರಿಗಳು ಗುರುವಾರ ಜಿಲ್ಲಾಧಿಕಾರಿ ಡಾ.ಸುರೇಶ ಇಟ್ನಾಳಗೆ ಮನವಿ ಸಲ್ಲಿಸಿ ಬ್ರಾಹ್ಮಣ ಸಮಾಜದ ಜನರ ಭಾವನೆಗಳಿಗೆ ಧಕ್ಕೆ ತಂದವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಜಿಲ್ಲಾ ಕೇಂದ್ರದಲ್ಲಿ ಬ್ರಾಹ್ಮಣ ಸಮಾಜಕ್ಕೆ ಪ್ರತ್ಯೇಕ ಸ್ಮಶಾನದ ಜಾಗ ಮಂಜೂರು ಮಾಡಬೇಕು. ಗವಿಸಿದ್ದೇಶ್ವರ ಮಠದ ಹಿಂಭಾಗದಲ್ಲಿ ಮೃತದೇಹ ಸುಡುವ ಪದ್ಧತಿಯಿರುವ ಸಮಾಜದವರ ಅಂತ್ಯಕ್ರಿಯೆ ನಡೆಯುತ್ತಿದೆ. ಇದರಿಂದ ಬ್ರಾಹ್ಮಣ ಸಮುದಾಯದ ವಿಧಿವಿಧಾನದಂತೆ ಅಂತಿಮ ಸಂಸ್ಕಾರ ನಡೆಸಲು ಸಾಧ್ಯವಾಗುತ್ತಿಲ್ಲ.

ಹಲವು ಬಾರಿ ಮೂರ್ನಾಲ್ಕು ಅಂತ್ಯಕ್ರಿಯೆಗಳು ನಡೆದಾಗ ಸರತಿಯಲ್ಲಿ ಕಾಯುವ ಪರಿಸ್ಥಿತಿ ನಿರ್ಮಾಣವಾದ ಉದಾಹರಣೆಗಳೂ ಇವೆ. ಆದ್ದರಿಂದ ಆಸಕ್ತಿ ವಹಿಸಿ ನಮ್ಮ ಸಮುದಾಯದ ಸ್ಮಶಾನಕ್ಕೆ ಒಂದು ಎಕರೆ ಭೂಮಿ ಮಂಜೂರು ಮಾಡಬೇಕು ಎಂದು ಆಗ್ರಹಿಸಿದರು.

ಈಗಿರುವ ಸ್ಮಶಾನದ ಭೂಮಿಯ ಅಭಿವೃದ್ಧಿಗೆ ಬೇಕಾದ ಕ್ರಮ ವಹಿಸಲಾಗುವುದು. ಸಮುದಾಯದ ಜನರಿಗೆ ಅನುಕೂಲ ಮಾಡಿಕೊಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಭರವಸೆ ನೀಡಿದರು.

ಮಹಾಸಭಾದ ಜಿಲ್ಲಾ ಚುನಾಯಿತಿ ಪ್ರತಿನಿಧಿ ಗುರುರಾಜ ಎನ್.ಜೋಶಿ, ರಾಘವೇಂದ್ರಸ್ವಾಮಿಗಳ ಇಲ್ಲಿನ ಮಠದ ವ್ಯವಸ್ಥಾಪಕ ಜಗನ್ನಾಥಚಾರ್ಯ ಹುನಗುಂದ, ಸಮುದಾಯದ ಮುಖಂಡ ಕೆ.ಜಿ. ಕುಲಕರ್ಣಿ, ವೇಣುಗೋಪಾಲ ಆಚಾರ್ ಜಹಗೀರದಾರ್, ರಾಜೇಂದ್ರ ಆಚಾರ್‌ಬಿಸಿರಳ್ಳಿ, ಸುಶೀಲೇಂದ್ರ ದೇಶಪಾಂಡೆ, ವಿಶ್ವನಾಥ್ ದೀಕ್ಷಿತ್, ಶ್ರೀನಿವಾಸ ಜೋಶಿ, ರವಿ ಪುರೋಹಿತ್, ಪ್ರಲ್ಹಾದ ಬನ್ನಿಗೋಳ, ಆನಂದ್, ರಾಮಮೂರ್ತಿ ಸಿದ್ಧಾಂತಿ, ಶ್ರೀನಾಥ್ ಆಯಾಚಿತ್, ಹರಿಸರ್ವೋತ್ತಮಾಚಾರ್, ಮೈಲಾರಾವ್ ಕುಲಕರ್ಣಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

ಮೇ 10ರಂದು ವಿದ್ಯುತ್ ವ್ಯತ್ಯಯ

ಕೊಪ್ಪಳ: ಜೆಸ್ಕಾಂ ಕೊಪ್ಪಳ ಉಪ ವಿಭಾಗ ವ್ಯಾಪ್ತಿಯ 110 ಕೆವಿ ಕೊಪ್ಪಳ ಹಾಗೂ 33 ಕೆವಿ ಕಿನ್ನಾಳ ಉಪಕೇಂದ್ರಕ್ಕೆ ಒಳಪಡುವ ವಿವಿಧ ಫೀಡರ್‌ಗಳಲ್ಲಿ ಮುಂಗಾರು ಪೂರ್ವ ನಿರ್ವಹಣೆ ಕಾಮಗಾರಿಯ ನಿಮಿತ್ತ ಸಂಬಂಧಿಸಿದ ಫೀಡರ್‌ವ್ಯಾಪ್ತಿಯಲ್ಲಿ ಮೇ 10 ರಂದು ಬೆಳಗ್ಗೆ 8 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾ ಗಲಿದೆ. ಕೊಪ್ಪಳ ಉಪಕೇಂದ್ರದ ಫೀಡರ್‌ಗಳಾದ ಎಫ್-1 ಕಾಮನೂರ, ಎಫ್-2 ಕೆಡಬ್ಲೂಎಸ್, ಎಫ್-3 ಎಸ್‌ಜಿ ಕಾಲೇಜ್, ಎಫ್-4 ಎಲ್ಐಎಸ್, ಎಫ್-5 ಬಗನಾಳ, ಎಫ್-6 ಬಸಾ ಪೂರ, ಎಫ್-8 ಭಾಗ್ಯನಗರ, ಎಫ್-9 ಬನ್ನಿಕಟ್ಟಿ, ಎಫ್ 10 ಗವಿಮಠ, ಎಫ್ 11 ಡಿಸಿ ಆಫೀಸ್, ಎಫ್ 12 ತಾಪಂ, ಎಫ್-13 ಕಾಳಿದಾಸನಗರ, ಎಫ್-14 ಜಾತ್ರ ಫೀಡರ್‌ವ್ಯಾಪ್ತಿಯಲ್ಲಿ ಮತ್ತು ಕಿನ್ನಾಳ ಉಪಕೇಂದ್ರದ ಎಫ್-1 ದೇವಲಾ ಪೂರ, ಎಫ್-2 ಕಿನ್ನಾಳ, ಎಫ್-3 ಓಜನಹಳ್ಳಿ, ಎಫ್-4 ಕಲಕೇರಿ, ಎಫ್-5 ಬುಡಶೆಟ್ನಾಳ, ಎಫ್-6 ಯತ್ನಟ್ಟಿ ಎನ್.ಜೆ.ವೈ ಫೀಡರ್‌ಗಳ ವ್ಯಾಪ್ತಿಗೆ ಒಳಪಡುವ ಕಾರ್ಯ ಮತ್ತು ಪಾಲನಾ ಶಾಖೆ-1, ಶಾಖೆ-2 ಮತ್ತು ಭಾಗ್ಯನಗರ ಶಾಖೆ ವ್ಯಾಪ್ತಿಯ ಎಲ್ಲ ಏರಿಯಾ ಹಾಗೂ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು. ಕಾಮಗಾರಿಯು ಬೇಗನೆ ಪೂರ್ಣಗೊಂಡಲ್ಲಿ ಯಾವುದೇ ಸಮಯದಲ್ಲಿ ವಿದ್ಯುತ್ ಸರಬರಾಜು ಮಾಡಲಾಗುವುದು. ಆದ್ದರಿಂದ ಈ ಅವಧಿ ಯಲ್ಲಿ ಸಾರ್ವಜನಿಕರು ಯಾವು ದೇ ತರಹದ ವಿದ್ಯುತ್ ದುರಸ್ತಿ ಕೆಲಸ ಕೈಗೊಳ್ಳಬಾರದೆಂದು ಸೂಚಿಸಲಾಗಿದೆ. ಒಂದು ವೇಳೆ ವಿದ್ಯುತ್ ಅಪಘಾತ ಸಂಭವಿಸಿದಲ್ಲಿ ಕಂಪನಿಯು ಜವಾಬ್ದಾರವಾಗಿರುವುದಿಲ್ಲ ಎಂದು ಕೊಪ್ಪಳ ಜೆ ಸ್ಕಾಂ ಕಾರ್ಯ ಮತ್ತು ಪಾಲನಾ ಉಪ ವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಂಜನೇಯಸ್ವಾಮಿಗೆ ಇಂದು ಚಿನ್ನದ ಕಿರೀಟ, ಗದೆ, ಪ್ರಭಾವಳಿ ಸಮರ್ಪಣೆ

• **ಕನ್ನಡಪ್ರಭ ವಾರ್ತೆ** ಗಂಗಾವತಿ

ತಾಲೂಕಿನ ಐತಿಹಾಸ ಪ್ರಸಿದ್ಧ ಆಂಜನೇಯಸ್ವಾಮಿ ಜನ್ಮಸ್ಥಳ ಅಂಜನಾದ್ರಿಯಲ್ಲಿರುವ ಆಂಜನೇಯಸ್ವಾಮಿಗೆ ಚಿನ್ನದ ಕಿರೀಟ, ಗದೆ ಮತ್ತು ಪ್ರಭಾವಳಿಯನ್ನು ಮೇ 8 ರಂದು ಸಮರ್ಪಣೆ ಮಾಡಲಾಗುತ್ತಿದೆ.

ಭಾರತದ ಖ್ಯಾತ ಕನ್‌ಸ್ಟ್ರಕ್ಷನ್ ಸಂಸ್ಥೆ ಎ.ಎಂ.ಆರ್‌ಗ್ರುಪ್‌ನ ಅಧ್ಯಕ್ಷ ಡಾ. ಎ.ಮಹೇಶ್ ರೆಡ್ಡಿ ಹಾಗೂ ಕುಟುಂಬದಿಂದ ಆಂಜನೇಯ ಸ್ವಾಮಿಗೆ ಚಿನ್ನದ ಪ್ರಭಾವಳಿ, ಕಿರೀಟ ಹಾಗೂ ಗದೆಯನ್ನು ಭಕ್ತಿಪೂರ್ವಕವಾಗಿ ಅರ್ಪಿಸಲಾಗುತ್ತಿದೆ. 1.50 ಕೆಜಿ ಅಂದಾಜು ₹ 2.30 ಕೋಟಿ ಮೌಲ್ಯದ ಆಭರಣ ಹೈದ್ರಾಬಾದ್‌ನಲ್ಲಿ ತಯಾರಿಸಲಾಗಿದ್ದು, ತಯಾರಕರೇ ಆಗಮಿಸಿ ಆಂಜನೇಯಸ್ವಾಮಿಗೆ ಅಲಂಕರಿಸಲಿದ್ದಾರೆ. ಈ ಹಿನ್ನೆಲೆ ಬೆಳಗ್ಗೆ 5 ಗಂಟೆಯಿಂದ ವಿವಿಧ ಧಾರ್ಮಿಕ ಕಾರ್ಯಕ್ರಮ ಜರುಗುತ್ತಿವೆ. ಆಂಧ್ರ, ಕರ್ನಾಟಕದಿಂದ ಪಂಡಿತರು ಆಗಮಿಸಿದ್ದು ಹೋಮ ಹವನಗಳು ಸೇರಿದಂತೆ ವಿವಿಧ ಕಾರ್ಯಕ್ರಮ ನೆರವೇರಿಸಲಿದ್ದಾರೆ.



ಸಾಹಿತ್ಯ-ಶಿಕ್ಷಣ-ಸಮಾಜ ಸೇವೆಯ ಸಮನ್ವಯ ಸಾಧಕ

ಪುತ್ತೂರು ಉಮೇಶ್ ನಾಯಕ್

ಪುತ್ತೂರು ಉಮೇಶ್ ನಾಯಕ್ ಅವರು ಸಾಹಿತ್ಯ, ಶಿಕ್ಷಣ ಹಾಗೂ ಸಮಾಜ ಸೇವಾ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಬಹುಮುಖ ವ್ಯಕ್ತಿತ್ವ. ಚಿಂತನೆ, ಕ್ರಿಯಾಶೀಲತೆ ಮತ್ತು ಮಾನವೀಯ ಸೇವಾಭಾವದ ಮೂಲಕ ಪುತ್ತೂರು ತಾಲೂಕು ಮಾತ್ರವಲ್ಲದೆ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ವಿಶಿಷ್ಟ ಗುರುತನ್ನು ನಿರ್ಮಿಸಿಕೊಂಡಿರುವ ಅವರು, ಸಮಾಜದ ವಿವಿಧ ಹಂತಗಳ ಮೇಲೆ ಸ್ಪಷ್ಟವಾದ ಸಕಾರಾತ್ಮಕ ಪ್ರಭಾವ ಬೀರಿರುವ ಸೇವಾ ಸಾಧಕರು.



ಪ್ರಸ್ತುತ ಪುತ್ತೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿರುವ ಅವರು, ಕಳೆದ ನಾಲ್ಕು ವರ್ಷಗಳಿಂದ ತಾಲೂಕಿನ 32 ಗ್ರಾಮಗಳಲ್ಲಿ ಪ್ರತಿಮಾಸವೂ ಮಕ್ಕಳ ಸಾಹಿತ್ಯ ಸಮ್ಮೇಳನದ ಸ್ವರೂಪದ ಗ್ರಾಮ ಸಾಹಿತ್ಯ ಸಂಭ್ರಮ ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಿದ್ದಾರೆ. ಗ್ರಾಮ ಸಾಹಿತ್ಯ ಸಂಭ್ರಮದಲ್ಲಿ ವಿದ್ಯಾರ್ಥಿ ಕವಿ ಗೋಷ್ಠಿ ಜೊತೆಗೆ ವಿನೂತನ ಪ್ರಯೋಗಗಳಾದ ಬಾಲಕಥಾಗೋಷ್ಠಿ, ಪ್ರವಾಸ ಕಥನ ಲೇಖನ, ನನ್ನ ಆಪ್ತಮಿತ್ರ ಲೇಖನ, ನನ್ನ ನೆಚ್ಚಿನ ಶಿಕ್ಷಕ ಲೇಖನ ಗೋಷ್ಠಿಗಳನ್ನು ಅಳವಡಿಸಿಕೊಂಡು ಯುವ ಜನತೆಯನ್ನು ಸಾಹಿತ್ಯ ಕ್ಷೇತ್ರದತ್ತ ಬರಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. 250ಕ್ಕೂ ಹೆಚ್ಚು ವಿವಿಧ ಕ್ಷೇತ್ರಗಳ ಸಾಧಕರನ್ನು ಗ್ರಾಮ ಮಟ್ಟದಲ್ಲಿ ಗುರುತಿಸಿ ಗೌರವಿಸಿದ್ದಾರೆ. 100ಕ್ಕೂ ಅಧಿಕ ಹೊಸ ಕೃತಿಗಳ ಪ್ರಕಟಣೆಗೆ ಮಾರ್ಗದರ್ಶನ ನೀಡಿ ಉದಯೋನ್ಮುಖ ಸಾಹಿತಿಗಳಿಗೆ ಬೆಂಬಲ ನೀಡಿದ್ದಾರೆ.

ಪುತ್ತೂರು ತಾಲೂಕಿನಲ್ಲಿ ಸುಮಾರು 20 ವರ್ಷಗಳಿಂದ ನಿಂತುಹೋದ ಕರ್ನಾಟಕ ರಾಜ್ಯೋತ್ಸವದ ಕನ್ನಡ ಭುವನೇಶ್ವರಿಯ ಭವ್ಯ ಮೆರವಣಿಗೆಯನ್ನು ಪುತ್ತೂರಿನ ಶಾಸಕರಾದ ಅಶೋಕ್ ರೈ ಯವರ ಮಾರ್ಗದರ್ಶನದಲ್ಲಿ ಸುಮಾರು 50ಕ್ಕೂ ಹೆಚ್ಚು ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಪುನರಾರಂಭಿಸಿ, ರಾಜ್ಯೋತ್ಸವದ ಅಂಗವಾಗಿ ನಡೆಯುವ ಸನ್ಮಾನವನ್ನು ತಾಲೂಕು ರಾಜ್ಯೋತ್ಸವ ಪ್ರಶಸ್ತಿ ಸ್ವರೂಪಕ್ಕೆ ತಂದ ಪ್ರಮುಖ ವ್ಯಕ್ತಿ. ಜಿಲ್ಲೆಯಲ್ಲಿ ತಾಲೂಕು ಮಟ್ಟದಲ್ಲಿ ರಾಜ್ಯೋತ್ಸವ ಪ್ರಶಸ್ತಿ ವ್ಯವಸ್ಥಿತವಾಗಿ ನಡೆಯುತ್ತಿರುವುದು ಪುತ್ತೂರಿನಲ್ಲಿ ಮಾತ್ರ ಎನ್ನುವುದು ಗಮನಾರ್ಹ.



ಕನ್ನಡಪ್ರಭ ಮತ್ತು ಸುವರ್ಣ ನ್ಯೂಸ್ ವತಿಯಿಂದ ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ 'ಸುವರ್ಣ ಕನ್ನಡಿಗ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕನ್ನಡದಲ್ಲೂ ಐಎಎಸ್ ಬರೆಯಿರಿ' ಅಭಿಯಾನ

ಶಿಕ್ಷಣ ಕ್ಷೇತ್ರದಲ್ಲಿ ಇವರ ಕೊಡುಗೆ ವಿಶೇಷವಾಗಿದೆ. ಕನ್ನಡ ಮಾಧ್ಯಮ ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಭವಿಷ್ಯವನ್ನು ಗಮನದಲ್ಲಿರಿಸಿ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಐಎಎಸ್ ಅಧಿಕಾರಿಗಳಾಗಬೇಕೆಂಬ ಮಹಾದಾಸೆಯಿಂದ ಕನ್ನಡದಲ್ಲೂ ಐಎಎಸ್ ಪರೀಕ್ಷೆ ಬರೆಯಿರಿ ಎಂಬ ಅಭಿಯಾನವನ್ನು ಆರಂಭಿಸಿ, 200ಕ್ಕೂ ಅಧಿಕ ಐಎಎಸ್- ಐಪಿಎಸ್ ಹಾಗೂ ತತ್ಸಮಾನ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಮಾಹಿತಿ ಕಾರ್ಯಗಾರಗಳನ್ನು ಕನ್ನಡದಲ್ಲೇ ನಡೆಸಿ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಅರಿವನ್ನುಂಟು ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಗ್ರಾಮಮಟ್ಟದಲ್ಲಿ ಸಾಹಿತ್ಯ ಸಂಭ್ರಮ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಜಾಗೃತಿ ಕಾರ್ಯಕ್ರಮಗಳನ್ನು ಸಂಯೋಜಿತವಾಗಿ ನಡೆಸಿರುವುದು ರಾಜ್ಯದ ಕನ್ನಡ ಸಾಹಿತ್ಯ ಪರಿಷತ್ತು ಇತಿಹಾಸದಲ್ಲೇ ವಿನೂತನ ಪ್ರಯತ್ನವಾಗಿದೆ.

ಸಾಹಿತ್ಯ ಕ್ಷೇತ್ರದಲ್ಲಿ ಅವರು ಸಾಧಕ ಲೇಖಕರಾಗಿಯೂ ಗುರುತಿಸಿಕೊಂಡಿದ್ದಾರೆ. ಇತಿಹಾಸ ಪ್ರಸಿದ್ಧ ಪುತ್ತೂರು ಶ್ರೀ ಮಹಾಲಿಂಗೇಶ್ವರ ದೇವಸ್ಥಾನದ ಸಂಕ್ಷಿಪ್ತ ಸ್ಥಳಪುರಾಣವಾದ ಸ್ವಯಂಭೂ ಮಹಾಲಿಂಗೇಶ್ವರ ಕೃತಿಯನ್ನು ರಚಿಸಿದ್ದು, ಈ ಕೃತಿ ಧಾರ್ಮಿಕ ದತ್ತಿ ಇಲಾಖೆಯಿಂದ ಪ್ರಕಟವಾಗಿದೆ. ಇದಲ್ಲದೆ ಇನ್ನೂ ಮೂರು ಕೃತಿಗಳನ್ನು ರಚಿಸಿ ಕನ್ನಡ ಸಾಹಿತ್ಯಕ್ಕೆ ತಮ್ಮ ಕೊಡುಗೆಯನ್ನು ನೀಡಿದ್ದಾರೆ.

ನಿರ್ಗತಿಕರ ಪುನರ್ವಸತಿ ಸೇವೆ: ಪುತ್ತೂರು ಉಮೇಶ್ ನಾಯಕ್ ಅವರ ಸೇವಾ ಬದುಕಿನ ಅತ್ಯಂತ ಸ್ಪರ್ಶಕ ಅಧ್ಯಾಯವೆಂದರೆ ನಿರ್ಗತಿಕರು, ಭಿಕ್ಷುಕರು ಮತ್ತು ಅನಾಥರ ಪುನರ್ವಸತಿ ಕಾರ್ಯ. ಕಳೆದ ಹತ್ತು ವರ್ಷಗಳಲ್ಲಿ 100ಕ್ಕೂ ಅಧಿಕ ನಿರ್ಗತಿಕರನ್ನು ಪುನರ್ವಸತಿ ಕೇಂದ್ರಗಳಿಗೆ ಸೇರಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಸಂಕಲ್ಪದೊಂದಿಗೆ ಅವರಿಗೆ ಹೊಸ ಬದುಕಿನ ಆಶಾಕಿರಣ ನೀಡಿದ್ದಾರೆ. ವಿಶೇಷವಾಗಿ ಎಚ್‌ಐವಿ ಪೀಡಿತ ಓರ್ವ ಮಹಿಳೆ ಹಾಗೂ ಇಬ್ಬರು ಮಕ್ಕಳನ್ನು ರಕ್ಷಿಸಿ, ಅವರಿಗೆ ವೈದ್ಯಕೀಯ ನೆರವು, ಆಶ್ರಯ ಮತ್ತು ವಿದ್ಯಾಭ್ಯಾಸದ ವ್ಯವಸ್ಥೆ ಕಲ್ಪಿಸಿರುವುದು ಇವರ ಮಾನವೀಯತೆಯ ಮಾದರಿಯಾಗಿದೆ.

ಗೌರವಗಳು :
ಇವರ ಸಾಹಿತ್ಯಿಕ, ಶೈಕ್ಷಣಿಕ ಹಾಗೂ ಸಮಾಜಮುಖಿ ಸೇವೆಗಳನ್ನು ಗುರುತಿಸಿ 2020ರಲ್ಲಿ ರೋಟರಿ ಅನ್‌ಸಂಗ್ ಹೀರೋ ಪ್ರಶಸ್ತಿ ಹಾಗೂ 2025ರಲ್ಲಿ ಪುತ್ತೂರು ತಾಲೂಕು ಗಣರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಇತ್ತೀಚೆಗೆ ಕನ್ನಡಪ್ರಭ ಏಷಿಯಾನೆಟ್ ಸುವರ್ಣನ್ಯೂಸ್‌ನ ಸುವರ್ಣ ಕನ್ನಡಿಗ' ಪ್ರಶಸ್ತಿಗೆ ಭಾಜನರಾಗಿದ್ದು, ಇವರ ಸಮಾಜಸೇವೆಗೆ ದೊರೆತ ಮುಕುಟವಾಗಿದೆ.

ತಮ್ಮ ಒಡಹುಟ್ಟಿದ ಡೌನ್ ಸಿಂಡ್ರೋಮ್ ಸಹೋದರ ಸುರೇಶ್ ನಾಯಕ್ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವಲ್ಲಿ ಹಾಗೂ ಅವರಿಗೆ ಜಾದೂ ಪ್ರದರ್ಶನ ಕಲಿಸಿ ಅವರ ಪ್ರತಿಭೆಯನ್ನು ಪ್ರಪಂಚಕ್ಕೆ ತೋರಿಸಿಕೊಟ್ಟಿದ್ದಾರೆ. ಅವರು ದೇಶದಾದ್ಯಂತ ಇದುವರೆಗೆ 500ಕ್ಕೂ ಅಧಿಕ ಉಚಿತ ಪ್ರದರ್ಶನಗಳ ಮೂಲಕ ಬುದ್ಧಿಮಾಂದ್ಯತಾ ಜನಜಾಗೃತಿಯನ್ನು ಮೂಡಿಸಿದ್ದಾರೆ. ಉಡುಪಿಯ ಡೌನ್ ಸಿಂಡ್ರೋಮ್ ಈಜುಗಾರ್ತಿ ಅರ್ಚನಾ ಜೈವಿಠ್ಠಲ್, ಮೈಸೂರಿನ ದಿವ್ಯಾಂಗ ಕೀ ಬೋರ್ಡ್ ಕಲಾವಿದ ಶ್ರೀ ಗಣೇಶ್ ಭಟ್ ಹಾಗೂ ಡೌನ್ ಸಿಂಡ್ರೋಮ್ ಜಾದೂಗಾರ ಸುರೇಶ ನಾಯಕ್ ಇವರಿಗೆ ವಿಶ್ವ ಅಂಗವಿಕಲ ದಿನಾಚರಣೆಯ ರಾಷ್ಟ್ರಪತಿಗಳ ರಾಷ್ಟ್ರ ಪ್ರಶಸ್ತಿ ದೊರಕುವಲ್ಲಿ ಮಹತ್ತರ ಪಾತ್ರ ವಹಿಸಿದ್ದಾರೆ.

ಪ್ರಸ್ತುತ ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನಲ್ಲಿ ಶ್ರೀರಾಮ್ ಶೇರ್ಸ್ ಅಂಡ್ ಫೈನಾನ್ಷಿಯಲ್ ಕನ್ಸಲ್ಟೆಂಟ್ ಎಂಬ ಸಂಸ್ಥೆಯ ಆಡಳಿತ ನಿರ್ದೇಶಕರಾಗಿದ್ದು, ಈ ಸಂಸ್ಥೆಯ ಮೂಲಕ ಶೇರು ಉದ್ಯಮವನ್ನು ನಡೆಸುತ್ತಿದ್ದಾರೆ. ಪತ್ನಿ ರೂಪಶ್ರೀ ನಾಯಕ್, ಪುತ್ರ ಸಾತ್ವಿಕ್ ನಾಯಕ್ ಹಾಗೂ ಸಹೋದರ ಸುರೇಶ್ ನಾಯಕ್ ಹಾಗೂ ಪೋಷಕರೊಂದಿಗೆ ಪುತ್ತೂರಿನಲ್ಲಿ ವಾಸವಾಗಿದ್ದಾರೆ (ದೂರವಾಣಿ: 9844401295).

ಕನ್ನಡಪ್ರಭ
ಶುಕ್ರವಾರ 8.05.2026

ಕರಮುಡಿಯಲ್ಲಿ ಬಣವೆಗೆ ಬೆಂಕಿ



ಯಲಬುರ್ಗಾ ತಾಲೂಕಿನ ಕರಮುಡಿಯಲ್ಲಿ ಅಗ್ನಿ ಅವಘಡದಿಂದಾಗಿ ಮೇವಿನ ಬಣವೆಗಳು ಸುಟ್ಟಿರುವುದು.

ಯಲಬುರ್ಗಾ: ತಾಲೂಕಿನ ಕರಮುಡಿ ಗ್ರಾಮದಲ್ಲಿ ಬುಧವಾರ ಮಧ್ಯಾಹ್ನ ಆಕಸ್ಮಿಕ ಬೆಂಕಿ ಅವಘಡದಿಂದ ನಾಲ್ಕುಮೇವಿನಬಣವೆಗಳಿಗೆಅಪಾರಹಾನಿಯಾಗಿದೆ. ಯಲ್ಲಪ್ಪ ದೊಡ್ಡವೀರಪ್ಪ ಗಡ್ಡದ, ಶರಣಪ್ಪ ಸಣ್ಣವೀರಪ್ಪಗಡ್ಡದರೈತರಿಗೆಸೇರಿದಬಣವೆಗಳಾಗಿವೆ. ಸ್ಥಳಕ್ಕೆ ಅಗ್ನಿಶಾಮಕ ಠಾಣೆ ಸಿಬ್ಬಂದಿ ಧಾವಿಸಿ ಬೆಂಕಿ ನಂದಿಸಿದ್ದಾರೆ. ಗ್ರಾಮ ಆಡಳಿತಾಧಿಕಾರಿ ದೇವರಾಜ ಭೇಟಿ ನೀಡಿ ಪರಿಶೀಲಿಸಿದ್ದಾರೆ.

ಗರಿಷ್ಠ 36°c | ಕನಿಷ್ಠ 27°c

ಸುದ್ದಿ ಸಿಂಚನ

ದೇಶ ಕಟ್ಟುವಲ್ಲಿ ಕಾರ್ಮಿಕರ ಪಾಲು ದೊಡ್ಡದು

ಕಾರಟಗಿ: ದೇಶದಲ್ಲಿ ಕೃಷಿ, ಕೈಗಾರಿಕೆ, ವಾಣಿಜ್ಯ ವಲಯ ಅಭಿವೃದ್ಧಿ ಸೇರಿದಂತೆ ನಗರ ಮತ್ತು ಪ್ರದೇಶಗಳ ಸ್ವಾಸ್ಥ್ಯ ಕಾಪಾಡುವ ಕಾರ್ಮಿಕರ ಪಾಲು ಬಹುದೊಡ್ಡದು ಎಂದು ಕರ್ನಾಟಕ ರೈತ ಜನ ಸಂಘದ ರಾಜ್ಯಾಧ್ಯಕ್ಷ ವೀರನಗೌಡ ಮಾಲಿಪಾಟೀಲ್ ಹೇಳಿದರು. ತಾಲೂಕಿನ ಬೂದುಗುಂಪಾ ಗ್ರಾಪಂನಲ್ಲಿ ಕಾರ್ಮಿಕ ದಿನಾಚರಣೆ ನಿಮಿತ್ತ ಕಾರ್ಮಿಕರಿಗೆ ಸಂಘದಿಂದ ಸನ್ಮಾನಿಸಿ ಮಾತನಾಡಿದರು. ಕಾರ್ಮಿಕರು ಕೇವಲ ಕೆಲಸಗಾರರಲ್ಲ. ಅವರೆಲ್ಲ ದೇಶದ ಅಭಿವೃದ್ಧಿಯ ಮೂಲಶಕ್ತಿ. ದುಡಿಮೆಯನ್ನೇ ದೇವರೆಂದು ಭಾವಿಸಿ ಶ್ರಮಿಸುವವರು ನಿಜವಾದ ಆಸ್ತಿ. ದೇಶದಲ್ಲಿ 1923 ನೇ ಇಸ್ವಿಯಲ್ಲಿ ಅಂದಿನ ಮದ್ರಾಸ್ ಇಂದಿನ ಚೆನ್ನೈಯಲ್ಲಿ ಕಾರ್ಮಿಕರ ದಿನಾಚರಣೆ ಆಚರಿಸಲಾಯಿತು. ಲಾಕ್ ಡೌನ್ ಇದ್ದಾಗ ಯಾರು ಹೊರಗಡೆ ಬರದೇ ಎಲ್ಲರೂ ಊಟ ಮಾಡಿ ಮಲಗಿದರೆ ಕಾರ್ಮಿಕರು ಜೀವದ ಭಯ ತೊರೆದು ಕೆಲಸ ಮಾಡಿದರು. ಪಿಡಿಒ ಡಾ. ವೆಂಕಟೇಶ್ ನಾಯಕ್ ಮಾತನಾಡಿ, ಕಾರ್ಮಿಕರ ಬಗ್ಗೆ ಒಲವು ತೋರಿದರು ಎನ್ನುವ ಕಾರಣ ಕಾರ್ಲ್ ಮಾರ್ಕ್ಸ್ ಹುಟ್ಟಿದ ದಿನವಾದ ಮೇ 1ನೇ ತಾರೀಕಿನಂದು ಕಾರ್ಮಿಕರ ದಿನಾಚರಣೆ ಆಚರಿಸುತ್ತಾರೆ. ಪ್ರತಿಯೊಂದು ರಂಗದಲ್ಲಿ ದುಡಿಯುವಂತ ಕಾರ್ಮಿಕರು ಕಷ್ಟಜೀವಿ. ಪಂಚಾಯತಿ ಕಾರ್ಮಿಕರಿಗೆ ರೈತ ಸಂಘ ಧೈರ್ಯ ಕೊಡುವುದರ ಜತೆಗೆ ಉತ್ಸಾಹ ಮೂಡಿಸಿದ್ದಾರೆ ಎಂದು ಹೇಳಿದರು. ಇದೇ ವೇಳೆ ಕಾರ್ಮಿಕ ನಿರುಪಾದಿ ಭರಮಪ್ಪ, ನಾಗೇಂದ್ರಪ್ಪ ದುರ್ಗಪ್ಪ, ಶರಣಮ್ಮ ವೀರೇಶ ಇವರಿಗೆ ಕರ್ನಾಟಕ ರೈತ ಜನ ಸಂಘದಿಂದ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಕರವಸೂಲಿಗಾರ ರಾಮಣ್ಣ ಭಜಂತ್ರಿ, ಬಸನಗೌಡ, ಬಸವರಾಜ, ಪೂಜಾ ಶಿವಕುಮಾರ್, ಮದರ್‌ಬಿ, ಸಲೀಂಸಾಬ್, ಮೈಬು ಪಾಷಾ ಮುಖಂಡರು, ಗ್ರಾಪಂ ಮಾಜಿ ಸದಸ್ಯ ಷಣ್ಮುಖಪ್ಪ ನಾಲ್ಕೆತ್ತಿನ್, ರಾಮಣ್ಣ, ವೀರಭದ್ರಪ್ಪ ಕುಂತನೂರ್, ಬಸವರಾಜ ಜುಟ್ಟಾಲ್, ಪಂಪಾಪತಿ ಗುಡಿದಿನಿ ಉಪಸ್ಥಿತರಿದ್ದರು.

ಇಂದು ಸಾಧನೆಗೈದ ವಿದ್ಯಾರ್ಥಿಗಳಿಗೆ ಸನ್ಮಾನ

ಕೊಪ್ಪಳ: ಕೊಪಣಾ ಟ್ರಸ್ಟ್ ವತಿಯಿಂದ 2025-26ನೇ ಶೈಕ್ಷಣಿಕ ಸಾಲಿನ ಎಸ್ಸೆಸ್ಸೆಲ್ಸಿಯಲ್ಲಿ ಉತ್ತಮ ಸಾಧನೆಗೈದ ವಿದ್ಯಾರ್ಥಿಗಳಿಗೆ ಸನ್ಮಾನ ಸಮಾರಂಭ ಮೇ 8 ರಂದು ಬೆಳಗ್ಗೆ 10.15ಕ್ಕೆ ನಗರದ ಗವಿಮಠ ಹತ್ತಿರ ಇರುವ ಶ್ರೀಮೇದಾರ ಶ್ರೀಕೇತೇಶ್ವರ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ಸಾನಿಧ್ಯವನ್ನು ಗವಿಮಠದ ಅಭಿನವ ಶ್ರೀಗವಿಸಿದ್ದೇಶ್ವರ ಮಹಾಸ್ವಾಮಿಗಳು ವಹಿಸುವರು. ಉದ್ಘಾಟನೆಯನ್ನು ಸ್ವಾಮಿವಿವೇಕಾನಂದ ಶಾಲೆಯ ಹಿರಿಯ ಶಿಕ್ಷಕ ಎಸ್.ಸಿ. ಹಿರೇಮಠ ನೆರವೇರಿಸುವರು.ಸಾಧನೆಗೈದ ವಿದ್ಯಾರ್ಥಿಗಳಿಗೆ ಹಿರಿಯ ಸಾಹಿತಿ ಹಾಗೂ ಚಲನಚಿತ್ರ ನಿರ್ಮಾಪಕ ಮಹಾಂತೇಶ ಮಲ್ಲನಗೌಡರ್, ಹಿರಿಯ ಪತ್ರಕರ್ತ ಸೋಮರೆಡ್ಡಿ ಅಳವಂಡಿ ಸನ್ಮಾನಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೊಪಣಾ ಟ್ರಸ್ಟ್, ಕೊಪ್ಪಳ ಗೌರವಾಧ್ಯಕ್ಷ ನೀಲಕಂಠಯ್ಯ ಹಿರೇಮಠ ವಹಿಸುವರು. ಮುಖ್ಯ ಅತಿಥಿಗಳಾಗಿ ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಮಹಾಂತೇಶ ಪಾಟೀಲ್ ಮೈನಳ್ಳಿ, ನಗರಸಭೆ ಮಾಜಿ ಸದಸ್ಯ ಮಲ್ಲಪ್ಪ ಕವಲೂರು, ಗುರುರಾಜ ಹಳಗೇರಿ, ಕೊಪ್ಪಳ ವಿಧಾನಸಭಾ ಕ್ಷೇತ್ರದ ಸಮಾಜಸೇವಕ ವೆಂಕಟೇಶ ಬಾರಕೇರ, ಸಮಾಜ ಸೇವಕ ಹನುಮರೆಡ್ಡಿ ಹೊಸಮನಿ, ಉಪನ್ಯಾಸಕ ಶಿವನಗೌಡ ಪೊಲೀಸ್ ಪಾಟೀಲ, ಸುಮತಿ ಹಿರೇಮಠ ಪಾಲ್ಗೊಳ್ಳುವರು ಎಂದು ಕೊಪಣಾ ಟ್ರಸ್ಟ್‌ನ ಅಧ್ಯಕ್ಷರು,ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶರಣಮ್ಮ ನಿಧನ

ಹನುಮಸಾಗರ: ಪಟ್ಟಣದ ನಿವೃತ್ತ ಹಿರಿಯ ಆರೋಗ್ಯಾಧಿಕಾರಿ ಶರಣಮ್ಮ ಮಾಲಿಪಾಟೀಲ್ (61) ಗುರುವಾರ ನಿಧನರಾದರು. ಮೃತರಿಗೆ ಪತಿ, ಓರ್ವ ಪುತ್ರ ಇದ್ದಾರೆ . ಅಂತ್ಯಕ್ರಿಯೆ ಗುರುವಾರ ನೆರವೇರಿತು.



ಕಾರಟಗಿ ತಾಲೂಕಿನ ಬೂದುಗುಂಪಾ ಗ್ರಾಮ ಪಂಚಾಯಿತಿ ಕಾರ್ಮಿಕರಿಗೆ ಕರ್ನಾಟಕ ರೈತ ಜನ ಸಂಘದಿಂದ ಸನ್ಮಾನಿಸಲಾಯಿತು. ಈ ವೇಳೆ ಸಂಘದ ಅಧ್ಯಕ್ಷ ವೀರನಗೌಡ, ಪಿಡಿಒ ಡಾ.ವೆಂಕಟೇಶ ನಾಯಕ್ ಸೇರಿದಂತೆ ಇನ್ನಿತರರು ಇದ್ದರು.



ಕೊಪ್ಪಳ ತಾಲೂಕಿನ ಇರಕಲ್ಲಗಡಾ ಗ್ರಾಪಂದಿಂದ ಕೊಡದಾಳ ಗ್ರಾಮದ ವಿಜಯ ಮಹಾಂತಶ್ರೀ ವೇದಿಕೆಯಲ್ಲಿ ಗುರುವಾರ ಮಹಾತ್ಮಗಾಂಧಿ ನರೇಗಾ ಯೋಜನೆಯ ಐಇಸಿ ಕಾರ್ಯಕ್ರಮದಡಿ ರೋಜಗಾರ್‌ದಿವಸ್ ಕಾರ್ಯಕ್ರಮ ಆಚರಿಸಲಾಯಿತು.

ಕುಡಿಯುವ ನೀರು ಪೂರೈಕೆಗೆ ಮೊದಲ ಆದ್ಯತೆ ನೀಡಿ: ನೇಗಿ

ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ ಸಮಿತಿ ಸಭೆಯಲ್ಲಿ ಸಿಇಒ



ಕೊಪ್ಪಳ ಜಿಪಂ ಸ್ಥಾಯಿ ಸಮಿತಿ ಕೊಠಡಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ (ಡಿ.ಡಬ್ಲ್ಯೂ.ಎಸ್.ಎಂ) ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಜಿಪಂ ಸಿಇಒ ವರ್ಣಿತ್ ನೇಗಿ ಮಾತನಾಡಿದರು.

> **ಪ್ರಸ್ತುತ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳಲ್ಲಿ ಬಾಡಿಗೆ ಆಧಾರದ ಮೇಲೆ ಖಾಸಗಿ ಕೊಳವೆ ಬಾವಿ ತೆಗೆದುಕೊಂಡು ವಿವಿಧ ಗ್ರಾಮಗಳಿಗೆ ನೀರು ಸರಬರಾಜು ಮಾಡಲಾಗುತ್ತಿದೆ. ಈ ಎಲ್ಲ ಕೊಳವೆ ಬಾವಿಗಳ ನೀರನ್ನು ಕಡ್ಡಾಯವಾಗಿ ಪರೀಕ್ಷಿಸಿದ ಬಳಿಕವೇ ನೀರು ಪೂರೈಸಬೇಕು.**
> • **ವರ್ಣಿತ್ ನೇಗಿ** ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ

• ***ಕನ್ನಡಪ್ರಭ ವಾರ್ತೆ*** ಕೊಪ್ಪಳ

ಜಿಲ್ಲೆಯಲ್ಲಿ ಕುಡಿಯುವ ನೀರು ಪೂರೈಕೆಗೆ ಮೊದಲ ಆದ್ಯತೆ ನೀಡಬೇಕು ಎಂದು ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಪಂ ಸ್ಥಾಯಿ ಸಮಿತಿ ಕೊಠಡಿ ಸಭಾಂಗಣದಲ್ಲಿ ಗುರುವಾರ ನಡೆದ ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ (ಡಿ.ಡಬ್ಲ್ಯೂ.ಎಸ್.ಎಂ) ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕುಡಿಯುವ ನೀರಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ನಡೆಯುತ್ತಿರುವ ಎಲ್ಲ ಕಾಮಗಾರಿ ಮೊದಲ ಆದ್ಯತೆ ಮೇರೆಗೆ ತ್ವರಿತವಾಗಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು. ಪ್ರಸ್ತುತ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳಲ್ಲಿ ಬಾಡಿಗೆ ಆಧಾರದ ಮೇಲೆ ಖಾಸಗಿ ಕೊಳವೆ ಬಾವಿ ತೆಗೆದುಕೊಂಡು ವಿವಿಧ ಗ್ರಾಮಗಳಿಗೆ ನೀರು ಸರಬರಾಜು ಮಾಡಲಾಗುತ್ತಿದೆ. ಈ ಎಲ್ಲ ಕೊಳವೆ ಬಾವಿಗಳ ನೀರನ್ನು ಕಡ್ಡಾಯವಾಗಿ ಪರೀಕ್ಷಿಸಿದ ಬಳಿಕವೇ ನೀರು ಪೂರೈಸಬೇಕು. ಈಗಾಗಲೇ ಎಲ್ಲ ಗ್ರಾಪಂಗಳಲ್ಲಿ ನೀರಿನ ಪರೀಕ್ಷಾ ಕಿಟ್ ನೀಡಲಾಗಿದೆ. ಅಗತ್ಯವಿದ್ದಲ್ಲಿ ನಿಯಮಾನುಸಾರ ಪ್ರಸ್ತಾವನೆ ಸಲ್ಲಿಸಿ. ಪರೀಕ್ಷೆಯಲ್ಲಿ ನೀರು ಕುಡಿಯಲು ಯೋಗ್ಯವಿಲ್ಲವೆಂದು ಕಂಡುಬಂದಲ್ಲಿ ತಕ್ಷಣ ಅಂತಹ ನೀರನ್ನು ಬಳಕೆ ಮಾಡದಂತೆ ತ್ವರಿತ ಕ್ರಮವಹಿಸಬೇಕು. ಕುಡಿಯಲು ಯೋಗ್ಯವಿಲ್ಲದ ಬೋರ್‌ವೆಲ್ ಸ್ಥಗಿತಗೊಳಿಸಬೇಕು. ಅಂತಹ ಗ್ರಾಮಗಳಿಗೆ ಟ್ಯಾಂಕರ್‌ಮೂಲಕವೇ ನಿರಂತರ ನೀರು ಸರಬರಾಜು ಮಾಡಲು ಕ್ರಮ ಕೈಗೊಳ್ಳಬೇಕು ಎಂದರು.

ಜಿಲ್ಲೆಯ ಯಾವುದೇ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಗೊಂಡರೆ ಇದರ ಬಗ್ಗೆ ಪ್ರತಿ ವಾರಕ್ಕೊಮ್ಮೆ ಸಭೆ ನಡೆಸಿ ಆಯಾ ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳ ಹಂತದಲ್ಲಿಯೇ ಕ್ರಮ ಕೈಗೊಳ್ಳಬೇಕು. ಎಲ್ಲ ಗ್ರಾಮಗಳಲ್ಲಿರುವ ಓ.ಎಚ್.ಟಿ ಟ್ಯಾಂಕನ್ನು ಪ್ರತಿ ತಿಂಗಳು ಸ್ವಚ್ಛ ಮಾಡಬೇಕು. ಗ್ರಾಮಗಳಲ್ಲಿ ಈಗಾಗಲೇ ಸರಬರಾಜು ಮಾಡುತ್ತಿರುವ ನೀರಿನ ಪೈಪಲೈನ್‌ಗಳಲ್ಲಿ ಯಾವುದೇ ರೀತಿಯ ಸೋರಿಕೆ ಕಂಡುಬಂದಲ್ಲಿ 24 ಗಂಟೆಗಳಲ್ಲಿ ದುರಸ್ಥಿಗೊಳಿಸಿ ನೀರು ಪೂರೈಕೆಯಾಗುವಂತೆ ಸಂಬಂಧಪಟ್ಟ ಅಧಿಕಾರಿ ನೋಡಿಕೊಳ್ಳಬೇಕು.

ಖಾಸಗಿ ಬೋರ್‌ವೆಲ್ ಹಾಗೂ ಟ್ಯಾಂಕರ್‌ನೀರಿಗೆ ಸರ್ಕಾರದ ನಿಯಮಾನುಸಾರ ದರ ನಿಗದಿಪಡಿಸಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಜಿಪಂ ಉಪಕಾರ್ಯದರ್ಶಿ ಟಿ. ಕೃಷ್ಣಮೂರ್ತಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕೊಪ್ಪಳ ವಿಭಾಗದ ಕಾರ್ಯಪಾಲಕ ಅಭಿಯಂತರ ಮಹೇಶ ಶಾಸ್ತ್ರಿ ಸೇರಿದಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವಿವಿಧ ವಿಭಾಗಗಳ ಎಇಇ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ (ಡಿ.ಡಬ್ಲ್ಯೂ.ಎಸ್.ಎಂ) ಸಮಿತಿಯ ಸದಸ್ಯರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ

ಕಾಮಗಾರಿಗಳ ಅಡಿಗಲ್ಲು ಸಮಾರಂಭದಲ್ಲಿ ಶಾಸಕ ಹಿಟ್ನಾಳ



ಕೊಪ್ಪಳ ತಾಲೂಕಿನ ಹೊಸ ಬಂಡಿಹರ್ಲಾಪುರದಲ್ಲಿ ₹4 ಕೋಟಿ ವೆಚ್ಚದಲ್ಲಿ ಕೆಪಿಎಸ್ ಶಾಲಾ ನಿರ್ಮಾಣಕ್ಕೆ ಅಡಿಗಲ್ಲು ನೆರವೇರಿಸಿದರು.

• ***ಕನ್ನಡಪ್ರಭ ವಾರ್ತೆ*** ಕೊಪ್ಪಳ

ಕ್ಷೇತ್ರದಲ್ಲಿ ಶಾಲೆ, ಕಾಲೇಜು ಸೇರಿದಂತೆ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಆದ್ಯತೆ ನೀಡುವುದಾಗಿ ಶಾಸಕ ರಾಘವೇಂದ್ರ ಹಿಟ್ನಾಳ ಹೇಳಿದ್ದಾರೆ.

ತಾಲೂಕಿನ ಬಂಡಿಹರ್ಲಾಪುರ ಜಿಪಂ ವ್ಯಾಪ್ತಿಯ ಅಗಳಕೇರಿ, ಶಿವಪುರ, ಹೊಸ ಬಂಡಿಹರ್ಲಾಪುರ, ಹಳೇ ಬಂಡಿಹರ್ಲಾಪುರ, ಬಸಾಪುರ, ಅಯೋಧ್ಯ, ನಾರಾಯಣಪೇಟೆ, ರಾಜರಾಮಪೇಟೆ, ಮಹಮದ್ ನಗರ ಹಾಗೂ ಕವಳಿ ಗ್ರಾಮಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಅಡಿಗಲ್ಲು ನೆರವೇರಿಸಿ ಮಾತನಾಡಿದರು.

ಕ್ಷೇತ್ರಕ್ಕೆ ಸುಮಾರು 8 ಕೆಪಿಎಸ್ ಶಾಲೆ ತರಲಾಗಿದೆ. ಈಗಾಗಲೇ ಹಿಟ್ನಾಳ, ಹೊಸಳ್ಳಿ, ಹೊಸ ಬಂಡಿಹರ್ಲಾಪುರ ಗ್ರಾಮಗಳಲ್ಲಿ ಶಾಲಾ ನಿರ್ಮಾಣದ ಕಾಮಗಾರಿಗೆ ಅಡಿಗಲ್ಲು ನೆರವೇರಿಸಿದ್ದೇವೆ. ಇದರಿಂದ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲ ಆಗಲಿದೆ. ಕಳೆದ 13 ವರ್ಷಗಳಲ್ಲಿ ಸುಮಾರು 1000ಕ್ಕೂ ಹೆಚ್ಚು ಶಾಲಾ ಕೊಠಡಿ ನಿರ್ಮಾಣ ಮಾಡಿದ್ದೇವೆ. ಹಿಂದುಳಿದ ವರ್ಗಗಳ ಇಲಾಖೆ, ಸಮಾಜ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಇಲಾಖೆದಡಿಯಲ್ಲಿ ಅನೇಕ ವಸತಿ ಶಾಲೆ ತರುವ ಕೆಲಸ ಮಾಡಿದ್ದೇವೆ ಎಂದರು.

ಬಂಡಿಹರ್ಲಾಪುರ ವ್ಯಾಪ್ತಿಯಲ್ಲಿ ಜಂಪ್ ಸರ್ವೇ ನಂಬರ್‌ಸಮಸ್ಯೆ ಇದ್ದು, ಅದನ್ನು ರೀ ಸರ್ವೇ ಮಾಡಿಸಿ ಅವುಗಳನ್ನು ಪರಿಹರಿಸುವ ಕೆಲಸ ಮಾಡುತ್ತೇವೆ.

> **13 ವರ್ಷಗಳಲ್ಲಿ ಸುಮಾರು 1000ಕ್ಕೂ ಹೆಚ್ಚು ಶಾಲಾ ಕೊಠಡಿ ನಿರ್ಮಾಣ ಮಾಡಿದ್ದೇವೆ. ಹಿಂದುಳಿದ ವರ್ಗಗಳ ಇಲಾಖೆ, ಸಮಾಜ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಇಲಾಖೆದಡಿಯಲ್ಲಿ ಅನೇಕ ವಸತಿ ಶಾಲೆ ತರುವ ಕೆಲಸ ಮಾಡಿದ್ದೇವೆ.**
> • **ರಾಘವೇಂದ್ರ ಹಿಟ್ನಾಳ** ಶಾಸಕ

ಈಗಾಗಲೇ ಅಧಿಕಾರಿಗಳು ಈ ಕಾರ್ಯದಲ್ಲಿ ತೊಡಗಿದ್ದಾರೆ ಅದಕ್ಕೆ ಶೀಘ್ರದಲ್ಲಿ ಪರಿಹಾರ ಕೊಡಿಸುವ ಕೆಲಸ ಮಾಡುತ್ತೇವೆ ಎಂದು ಶಾಸಕರು ರೈತರಿಗೆ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಉದ್ಯಮಿ ಚಂದ್ರಶೇಖರ ಐ.ಎಲ್.ಸಿ, ಗ್ಯಾರಂಟಿ ಸಮಿತಿ ಅಧ್ಯಕ್ಷ ಬಾಲಚಂದ್ರನ್ ಮುನಿರಬಾದ್, ಕೆ.ಎಂ.ಸೈಯದ್, ವಿಶ್ವನಾಥ್ ರಾಜೂರು, ಯಂಕಪ್ಪ ಹೊಸಳ್ಳಿ, ಚಂದಕೃಷ್ಣ ಹರ್ಲಾಪುರ, ಕನಕರಾಯ, ನಾಗರಾಜ ಪಠವಾರಿ, ಯಮನೂರಪ್ಪ ಬಸಾಪುರ, ಸೀನಣ್ಣ ಶಿವಪುರ, ಧರ್ಮರಾಜ್ ಕಂಪಸಾಗರ, ಮಲ್ಲು ಪೂಜಾರ್, ಭೀಮಣ್ಣ ಹರ್ಲಾಪುರ, ರೇಣುಕಮ್ಮ ಹರ್ಲಾಪುರ, ಸೋಮಶೇಖರ್ ಹಿಟ್ನಾಳ್, ಬಸಣ್ಣ ಅಗಳಕೇರಿ, ಓಬಳೇಶ, ಅಶೋಕ ಹಿಟ್ನಾಳ,ಅಕ್ಬರ್‌ಪಲ್ಟಾನ್ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಕುಡಿವ ನೀರು ಸರಬರಾಜು ಸಮಸ್ಯೆಗೆ ತಕ್ಷಣ ಸ್ಪಂದನೆ



ಹನುಮಸಾಗರದ ಆಶ್ರಯ ಕಾಲನಿಗೆ ಗುರುವಾರ ಪಪಂ ಅಧಿಕಾರಿ ರೆಡ್ಡಿ ರಾಯನಗೌಡ ಬೇಟಿ ನೀಡಿ ಕುಡಿವ ನೀರಿನ ಪೈಪ್ ಲೈನ್ ಸರಿಪಡಿಸಿದರು.

• ***ಕನ್ನಡಪ್ರಭ ವಾರ್ತೆ*** ಹನುಮಸಾಗರ

ಪಟ್ಟಣದ ವಿವಿಧ ವಾರ್ಡ್‌ಗಳಲ್ಲಿ ಉಂಟಾಗಿದ್ದ ಕುಡಿವ ನೀರಿನ ಸಮಸ್ಯೆ ಗಂಭೀರವಾಗಿ ಪರಿಗಣಿಸಿದ ಪಪಂ ಮುಖ್ಯಾಧಿಕಾರಿ ರೆಡ್ಡಿ ರಾಯನಗೌಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಪಟ್ಟಣದ 6ನೇ ವಾರ್ಡ್ ಆಶ್ರಯ ಕಾಲನಿಯಲ್ಲಿ ಕಳೆದ ಮೂರು ನಾಲ್ಕು ದಿನಗಳಿಂದ ದಿನನಿತ್ಯ ಬಳಕೆಯ ನೀರಿನ ಪೈಪ್‌ಲೈನ್ ಬ್ಲಾಕ್ ಆಗಿದ್ದರಿಂದ ವಾರ್ಡ್ ನಿವಾಸಿಗಳಿಗೆ ಸಮರ್ಪಕವಾಗಿ ನೀರು ಸರಬರಾಜಾಗುತ್ತಿರಲಿಲ್ಲ. ಸುಮಾರು ಒಂದು ವಾರದಿಂದ ನೀರಿನ ಸಮಸ್ಯೆಯಿಂದ ಜನರು ಸಂಕಷ್ಟ ಅನುಭವಿಸುತ್ತಿದ್ದರು. ಈ ಹಿನ್ನೆಲೆಯಲ್ಲಿ ಮುಖ್ಯಾಧಿಕಾರಿಗಳು ಸ್ವತಃ ನೀರುಗಂಟೆಯವರು ಹಾಗೂ ಪಪಂ ಸಿಬ್ಬಂದಿ ಕರೆದುಕೊಂಡು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಪರಿಶೀಲನೆಯ ವೇಳೆ ಪೈಪ್‌ಲೈನ್‌ನಲ್ಲಿ ಉಂಟಾಗಿದ್ದ ಬ್ಲಾಕ್ ತೆರವುಗೊಳಿಸಿ ನೀರು ಸರಾಗವಾಗಿ ಹರಿಯುವಂತೆ ಕ್ರಮ ಕೈಗೊಳ್ಳಲಾಯಿತು. ಬಳಿಕ ವಾರ್ಡ್‌ನ ವಿವಿಧ ಮನೆಗಳಿಗೆ ನೀರು ಸರಿಯಾಗಿ ತಲುಪುತ್ತಿರುವುದನ್ನು ಅಧಿಕಾರಿಗಳು ಖಚಿತಪಡಿಸಿಕೊಂಡರು. ಪಟ್ಟದ ವಸ್ತ್ರದ ಲೇಔಟ್ ಕೆಲ ಮನೆಗಳಿಗೆ ಕೂಡ ನೀರು ಸರಬರಾಜು ಆಗುತ್ತಿರಲಿಲ್ಲ ಎಂಬ ಮಾಹಿತಿ ದೊರಕಿದ ಹಿನ್ನೆಲೆಯಲ್ಲಿ ಅಲ್ಲಿಗೂ ಭೇಟಿ ನೀಡಿದ ಮುಖ್ಯಾಧಿಕಾರಿಗಳು ಸಮಸ್ಯೆ ಪರಿಶೀಲಿಸಿದರು. ಮನೆಗಳಿಗೆ ಹೊಸದಾಗಿ ಪೈಪ್ ಸಂಪರ್ಕ ವ್ಯವಸ್ಥೆ ಮಾಡಿ ನೀರು ಬಿಡುಗಡೆ ಮಾಡುವಂತೆ ಸಿಬ್ಬಂದಿಗೆ ಸೂಚನೆ ನೀಡಿದರು.

ಬೇಸಿಗೆ ತೀವ್ರವಾಗಿರುವುದರಿಂದ ಸಾರ್ವಜನಿಕರಿಗೆ ಯಾವುದೇ ರೀತಿಯ ನೀರಿನ ತೊಂದರೆ ಆಗಬಾರದು. ನೀರುಗಂಟೆಯವರು ನಿಗದಿತ ಸಮಯಕ್ಕೆ ಸರಿಯಾಗಿ ನೀರು ಬಿಡಬೇಕು ಹಾಗೂ ಸಾರ್ವಜನಿಕರ ಸಮಸ್ಯೆಗೆ ತಕ್ಷಣ ಸ್ಪಂದಿಸಬೇಕು ಎಂದು ಮುಖ್ಯಾಧಿಕಾರಿ ರೆಡ್ಡಿ ರಾಯನಗೌಡ ಸೂಚಿಸಿದರು.

ಈ ಸಂದರ್ಭದಲ್ಲಿ ಪಪಂ ಸಿಬ್ಬಂದಿ ವಿರೇಶ ಕುರ್ನಾಳ ನೀರುಗಂಟೆ ಹಾಗೂ ವಾರ್ಡ್ ನಿವಾಸಿಗಳು ಇದ್ದರು.

ಅಮರೇಶ ಮೈಲಾಪೂರ ಬಣ ಮೇಲುಗೈ



ಕಾರಟಗಿ ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘಕ್ಕೆ ನಡೆದ ಚುನಾವಣೆಯಲ್ಲಿ ವಿಜೇತ ಅಮರೇಶ ಮೈಲಾಪುರ ಬಣ ವಿಜಯೋತ್ಸವ ಆಚರಿಸಿತು.

• ***ಕನ್ನಡಪ್ರಭ ವಾರ್ತೆ*** ಕಾರಟಗಿ

ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ದೇಶಕರ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಶಿಕ್ಷಕ ಅಮರೇಶ ಮೈಲಾಪೂರ ಬಣ ಮೇಲುಗೈ ಸಾಧಿಸಿದೆ.

ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕಾರಟಗಿ ಘಟಕದ ನಿರ್ದೇಶಕರ ಸಾಮಾನ್ಯ ಕ್ಷೇತ್ರದ 2 ಸ್ಥಾನಗಳಿಗೆ ಚುನಾವಣೆಯಲ್ಲಿ ನಿರ್ದೇಶಕರ ಸ್ಥಾನಕ್ಕೆ ಅಮರೇಶ ಮೈಲಾಪೂರ ಮತ್ತು ಮಹಿಳಾ ಕ್ಷೇತ್ರದಿಂದ ಶಂಕ್ರಮ್ಮ ಸಜ್ಜನ ಮತ್ತು ಶಿಕ್ಷಕ ಬಸವರಾಜ ರ್‌ಯಾವಳದ ಮತ್ತು ಶಿಕ್ಷಕಿ ಉಮಾ ಮಹೇಶ್ವರಿ ಶೆಟ್ಟರ್‌ಆಯ್ಕೆ ಬಯಸಿ ಸ್ಪರ್ಧಿಸಿದ್ದರು.

ಎರಡು ಗುಂಪುಗಳ ನಡುವೆ ತೀವ್ರ ಜಿದ್ದಾಜಿದ್ದಿಯ ಸ್ಪರ್ಧೆ ಏರ್ಪಟ್ಟಿತ್ತು. ಒಟ್ಟು 116 ಶಿಕ್ಷಕ ಮತದಾರರಲ್ಲಿ 110 ಮತಗಳು ಚಲಾವಣೆಗೊಂಡಿದ್ದು, 6 ಜನ ಮತದಾರರು ಮತದಾನಕ್ಕೆ ಗೈರಾಗಿದ್ದರು. ಚುನಾವಣೆಯಲ್ಲಿ ಅಮರೇಶ ಮೈಲಾಪೂರ ಇವರಿಗೆ 58 ಮತ ಪ್ರತಿಸ್ಪರ್ಧಿ ಬಸವರಾಜ ರ್‌ಯಾವಳದಗೆ ಕೇವಲ 49 ಮತ ಪಡೆದು ಪರಾಭವಗೊಂಡರು. ಅಮರೇಶ ಮೈಲಾಪೂರ ತಂಡದ ಶಂಕ್ರವ್ವ ಸಜ್ಜನ 60 ಮತಗಳನ್ನು ಪಡೆದು ಎದುರಾಳಿ ಉಮಾಮಹೇಶ್ವರಿ 49 ಮತ ಪಡೆದು ಪರಾಭವಗೊಂಡರು.

ಅಮರೇಶ ಮೈಲಾಪೂರ ತಂಡ ಎರಡು ಸ್ಥಾನಗಳಲ್ಲಿ ಜಯಗಳಿಸಿ ಅಭೂತ ಪೂರ್ವ ಸಾಧನೆ ಮಾಡಿದರೆ. ಎದುರಾಳಿ ಬಸವರಾಜ ರ್‍ಯಾವಳದ ತಂಡ ಎರಡು ಸ್ಥಾನಗಳಲ್ಲೂ ಪರಾಭವಗೊಂಡ ಮುಖಭಂಗ ಅನುಭವಿಸಿದೆ.

ಇಲ್ಲಿನ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ನಡೆದ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಚುನಾವಣೆ 2026 ರಿಂದ 2031ರ ಅವಧಿಗೆ ಚುನಾವಣೆ ನಡೆಯಿತು. ಬೆಳಗ್ಗೆ 8-30ರಿಂದ 4-30 ವರಗೆ ಚುನಾವಣೆ ನಡೆಯಿತು. ಒಟ್ಟು 116 ಪ್ರಾಥಮಿಕ ಶಾಲಾ ಶಿಕ್ಷಕ ಮತದಾರರು ಇದರಲ್ಲಿ 110 ಶಿಕ್ಷಕರು ಮತ ಚಲಾಯಿಸಿದರು.

ಅಮರೇಶ ಮೈಲಾಪೂರ ಸಾಮಾನ್ಯ ಪುರುಷ ಕ್ಷೇತ್ರದಲ್ಲಿ ಸ್ಪರ್ಧೆ ಮಾಡಿ 58 ಮತ ಪಡೆದು ವಿಜಯಶಾಲಿಗಳಾದರು. ತಮ್ಮ ಎದುರಾಳಿ ಬಣದ ಬಸವರಾಜ್ ರ್‌ಯಾವಳದ 49 ಮತ ಪಡೆದು 9 ಮತಗಳ ಅಂತರದಿಂದ ಪರಾಭವಗೊಂಡರು ಹಾಗೂ ಮಹಿಳಾ ಕ್ಷೇತ್ರದಿಂದ ಶಂಕ್ರಮ್ಮ ಸಜ್ಜನ ಸ್ಪರ್ಧೆ ಮಾಡಿ 60 ಮತ ಪಡೆದು ಜಯ ಗಳಿಸಿದರು ಎದುರಾಳಿ ಬಣದ ಅಭ್ಯರ್ಥಿ ಉಮಾಮಹೇಶ್ವರಿ 49 ಮತ ಪಡೆದು ಪರಾಭವಗೊಂಡರು. ಈ ಚುನಾವಣೆಯಲ್ಲಿ ಅಮರೇಶ ಮೈಲಾಪೂರ, ತಿಮ್ಮಣ್ಣ ನಾಯಕ, ತೋಟಯ್ಯ ಅಂಗಡಿ, ಬಸಯ್ಯ ಸ್ವಾಮಿ ಶ್ಯಾಮಸುಂದರ ಇಂಜಿನಿ, ರಾಜಶೇಖರ್‌ಸಿರಿವಾರ ನೇತೃತ್ವದ ತಂಡ ಭರ್ಜರಿ ಗೆಲುವು ಸಾಧಿಸಿ ನಗೆ ಬೀರಿದೆ

ಪರಾಜಿತ ತಂಡದ ಬಸವರಾಜ, ಚನ್ನಬಸಪ್ಪ ಒಕ್ಕಳದ, ಶಿಕ್ಷಕರ ಸಂಘದ ಹಾಲಿ ಅಧ್ಯಕ್ಷ ವಿಠ್ಠಲ ಜೀರಗಾಳಿ, ಕಾಯದರ್ಶಿ ಬೆನಕಟ್ಟಿ ದ್ಯಾವಣ್ಣ ತಂಡಕ್ಕೆ ಶಿಕ್ಷಕರು ಸೋಲುಣಿಸಿದರು.

ವಂದನೆ... | ಮುಗಿಲು ಮುಟ್ಟಿದ ಕುಟುಂಬಸ್ಥರ, ಬಂಧು-ಬಾಂಧವರ ಆಕ್ರಂದನ

ಹೃದಯಾಘಾತದಿಂದ ಯೋಧ ನಿಧನ, ಗೌರವದೊಂದಿಗೆ ಅಂತಿಮ ಸಂಸ್ಕಾರ

• ***ಕನ್ನಡಪ್ರಭ ವಾರ್ತೆ*** ಕಾರಟಗಿ

ಮಣಿಪುರ ಕೇಂದ್ರೀಯ ಮೀಸಲು ಪಡೆಯಲ್ಲಿ (ಸಿಆರ್‌ಪಿಎಫ್) ಯೋಧರಾಗಿ ಕಾರ್ಯ ನಿರ್ವಹಿಸುತ್ತಿದ್ದ ಪಟ್ಟಣದ ಮಂಜುನಾಥ್ ಲಿಂಗಪ್ಪ ಗೋಡಿ (55) ಮಂಗಳವಾರ ಸಂಜೆ



ಹೃದಯಾಘಾತದಿಂದ ಮೃತರಾಗಿದ್ದಾರೆ. ಇವರ ಅಂತ್ಯಕ್ರಿಯೆ ಸ್ವಗ್ರಾಮ ಕಾರಟಗಿಯಲ್ಲಿ ಗುರುವಾರ ಸಂಜೆ ಗೌರವದೊಂದಿಗೆ ನೆರವೇರಿತು.

ಕರ್ತವ್ಯದ ಮೇಲೆ ಇದ್ದ ಮಂಜುನಾಥ ಹೃದಯಾಘಾತ ಸಂಭವಿಸಿದಾಗ ಅವರನ್ನು ಮಣಿಪುರದ ಸ್ಥಳೀಯ ಆಸ್ಪತ್ರೆಯಲ್ಲಿ ದಾಖಲಿಸಲಾಗಿತ್ತು. ಚಿಕಿತ್ಸೆಗೆ ಸ್ಪಂದಿಸದೇ ಮಂಗಳವಾರ ಕೊನೆಯುಸಿರೆಳೆದಿದ್ದರು.

1991ರಲ್ಲಿ ಸೇನೆಗೆ ಸೇರ್ಪಡೆಗೊಂಡಿದ್ದ ಅವರು ಯಲಹಂಕದಲ್ಲಿ ಸಿಆರ್‌ಪಿಎಫ್ ಪೊಲೀಸ್ ನಂತರ, ಹವಾಲ್ದಾರ್,ಎಎಸ್‌ಐ ಆಗಿ ಸೇವೆ ಆಗಿ ರಾಷ್ಟ್ರದ ಜಮ್ಮು ಕಾಶ್ಮೀರ ಸೇರಿದಂತೆ 20 ರಾಜ್ಯಗಳಲ್ಲಿ ಕಳೆದ 35 ವರ್ಷಗಳಿಂದ ಸೇವೆ ಸಲ್ಲಿಸುತ್ತಾ ಸದ್ಯ ಮಣಿಪುರದಲ್ಲಿ ಪಿಎಸ್‌ಐ ಆಗಿ ಕಾರ್ಯ ನಿರ್ವಹಿಸುತ್ತಿದ್ದರು.



ಕಾರಟಗಿ ಕೆಪಿಎಸ್ ಕಾಲೇಜು ಮೈದಾನದಲ್ಲಿ ಮೃತ ಯೋದ ಮಂಜುನಾಥ ಗೋಡೆಗೆ ಗೌರವ ವಂದನೆ ಸಲ್ಲಿಸುತ್ತಿರುವ ಸಿಆರ್‌ಪಿಎಫ್ ಯೋಧರು.

ಅವರಿಗೆ ತಂದೆ, ತಾಯಿ, ಸಹೋದರರು ಹಾಗೂ ಸಹೋದರಿಯರು ಸೇರಿದಂತೆ ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗವಿದೆ.

ಮಿಲಿಟರಿ ಗೌರವದೊಂದಿಗೆ ಸನ್ಮಾನ :ಪಾರ್ಥಿವ ಶರೀರ ಗುರುವಾರ ಮಧ್ಯಾಹ್ನ ಬರುವ ಸುದ್ದಿ ತಿಳಿಯುತ್ತಿದ್ದಂತೆ ಪಟ್ಟಣದ ನೂರಾರು ಯುವಕರು, ಗೆಳೆಯರು, ಹಿತೈಷಿಗಳು, ಸಂಘ ಸಂಸ್ಥೆಯ ಪದಾಧಿಕಾರಿ, ಪುರಸಭೆ ಕಾರ್ಯಾಲಯದ ಮುಂದೆ ಜಮಾವಣೆಗೊಂಡಿದ್ದರು.

ಯೋಧನ ಪಾರ್ಥಿವ ಶರೀರ ಮನೆಗೆ ತಲುಪುತ್ತಿದ್ದಂತೆ ಕುಟುಂಬಸ್ಥರ ಹಾಗೂ ಬಂಧು-ಬಾಂಧವರ ಆಕ್ರಂದನ ಮುಗಿಲು ಮುಟ್ಟಿತ್ತು. ಮನೆಯಲ್ಲಿ ಅರ್ಧ ಗಂಟೆ ಇಟ್ಟು ಕುಟುಂಬಸ್ಥರೆಲ್ಲರೂ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು. ನಂತರ ಅಲ್ಲಿಂದ ಕರ್ನಾಟಕ ಪಬ್ಲಿಕ್ ಶಾಲೆಯ ಪಿಯು ಕಾಲೇಜು ಆವರಣದಲ್ಲಿ ಸಾರ್ವಜನಿಕರ ಅಂತಿಮ ದರ್ಶನಕ್ಕೆ ತರಲಾಗಿತು.

ಈ ವೇಳೆ ಯುವ ಮುಖಂಡರಾದ ಶಶಾಂಕ ತಂಗಡಗಿ, ಮೌನೇಶ ದಢೇಸೂಗೂರು, ಚನ್ನಬಸಪ್ಪ ಸುಂಕದ್, ವಿಶೇಷ ಎಪಿಎಂಸಿ ಮಾಜಿ ಅಧ್ಯಕ್ಷ ಶಶಿಧರಗೌಡ ಪಾಟೀಲ್, ಜಿಪಂ ಮಾಜಿ ಅಧ್ಯಕ್ಷ ಅಮರೇಶ ಕುಳಗಿ, ಪುರಸಭೆ ಮಾಜಿ ಅಧ್ಯಕ್ಷ ಶರಣೇಶ ಸಾಲೋಣಿ, ಉದ್ಯಮಿ ವೀರೇಶಪ್ಪ ಚಿನಿವಾಲ, ಪುರಸಭೆ ಸದಸ್ಯ ಎಚ್. ಈಶಪ್ಪ, ಪ್ರಭು ಉಪನಳ, ಬಸವರಾಜ ಪಗಡದಿನ್ನಿ ಹಾಗೂ ಬಸವರಾಜ ಶೆಟ್ಟರ್, ಹನುಮಂತಪ್ಪ ತೊಂಡಿಹಾಳ ಸೇರಿದಂತೆ ವಿವಿಧ ಸಂಘ-ಸಂಸ್ಥೆ, ಶಾಲಾ ಆಡಳಿತ ಮಂಡಳಿ ಪದಾಧಿಕಾರಿಗಳು ಯೋಧನ ಪಾರ್ಥಿವ ಶರೀರಕ್ಕೆ ಪುಷ್ಪ ನಮನ ಸಲ್ಲಿಸಿ ಅಂತಿಮ ದರ್ಶನ ಪಡೆದು ಅಂತಿಮ ಸಂಸ್ಕಾರದಲ್ಲಿ ಭಾಗವಹಿಸಿದ್ದರು.

ಬೆಂಗಳೂರಿನ ಯಲಹಂಕದ ಕೇಂದ್ರಿಯ ಮೀಸಲು ಪಡೆಯ ಡೆಪ್ಯುಟಿ ಕಮಾಂಡೆಂಟ್ ಟಿ.ಎಂ.ಜಿತೇಶ್ ನೇತೃತ್ವದಲ್ಲಿ 20 ಜನ ಯೋಧರು ಹಾಗೂ ಪೊಲೀಸ್ ಪಡೆಗಳಿಂದ ಮೂರು ಸುತ್ತು ಗುಂಡು ಹಾರಿಸಿ ಗೌರವ ವಂದನೆ ಸಲ್ಲಿಸಲಾಯಿತು.

ಪಟ್ಟಣದ ವೀರಶೈವ ರುದ್ರಭೂಮಿಯಲ್ಲಿ ಕುಟುಂಬ ವರ್ಗ, ಸ್ಥಳೀಯರು, ವೀರಶೈವ ಸಮುದಾಯದ ವರು ನಡುವೆ ಧಾರ್ಮಿಕ ವಿಧಿ ವಿಧಾನಗಳ ಮೂಲಕ ಅಂತ್ಯಕ್ರಿಯೆ ನೆರವೇರಿತು.

ಸುದ್ದಿ ಸಿಂಚನ

ಕುರಾನ್ ತಾಲಿಮ್ ಶಿಬಿರ ಯಶಸ್ವಿ

ಕೊಪ್ಪಳ: ನಗರದ ಸರ್ದಾರ ಗಲ್ಲಿಯಲ್ಲಿರುವ ಮದೀನಾ ಮಸ್ಜಿದ್‌ನಲ್ಲಿ 60 ಮಕ್ಕಳಿಗೆ ಕಳೆದ ಒಂದು ತಿಂಗಳಿಂದ ಹಮ್ಮಿಕೊಂಡಿದ್ದ ಕುರಾನ್ ಅರ್ಬಿ ತಾಲಿಮ್ ಕ್ಯಾಂಪ್ ಮುಕ್ತಾಯವಾಯಿತು.

ಹೈದರ್‌ಅಲಿ ಮೌಲಾನ ಪೇಶೀಮಾಮ್ ಮಕ್ಕಳಿಗೆ ಬೇಸಿಗೆ ಶಿಬಿರ ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ಸರ್ದಾರಗಲ್ಲಿ ಪಂಚಕಮಿಟಿ ಅಧ್ಯಕ್ಷ ಖಾದರ್‌ಸಾಬ್ ಕುದುರಿಮೋತಿ, ಮಾನ್ವಿ ಪಾಷಾ, ಮುಸ್ತಫಾ ಕುದ್ರಿಮೋತಿ, ಸೈಫುಲ್ಲಾ ಸಾಹೇಬ್, ಶೋಯಿಬ್ ಸಾಹೇಬ್, ಇಸ್ಮಾಯಿಲ್ ಸಾಬ್ ಸಿದ್ನೆಕೊಪ್ಪ, ನಿವೃತ್ತ ಶಿಕ್ಷಕ ಎ.ಎ.ನದಾಫ್, ಖಾಸಿಂಸಾಬ್ ಸಂಕನೂರ್, ಮುನೀರ್‌ಸಿದ್ದಿಕಿ,ಮೀರಾಸಾಬ್ ಬನಿಹೊಳ್, ರಿಯಾಜ್ ಹನುಕುಂಟಿ, ಸಲೀಂ ಕುದುರಿಮೋತಿ, ಮೌಲಾಸಾಬ್ ಅಲಂಬರದಾರ, ಖಾಸಿಂಸಾಬ್ ಗರಸಗಲ್, ಎಸ್ಡಿಎಂಸಿ ಅಧ್ಯಕ್ಷ ಅಬ್ದುಲ್ ರೆಹಮಾನ್ ಹುಬ್ಬಳ್ಳಿ, ಅಕ್ಬರ್‌ಸಾಬ್ ನೂರಬಾಷಾ, ಖಲಂದರ್‌ಚಳಿಗಿಡದ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

ಬಿಎಸ್‌ವೈ ಸಾಮಾಜಿಕ ಕಳಕಳಿಯ ಅಭಿಮಾನೋತ್ಸವ

ಮಾಜಿ ಸಚಿವ ಹಾಲಪ್ಪ ಆಚಾರ್‌ಹೇಳಿಕೆ | ಯಲಬುರ್ಗಾ ಕ್ಷೇತ್ರದಿಂದ 6 ಸಾವಿರ ಕಾರ್ಯಕರ್ತರು ಭಾಗಿ

• **ಕನ್ನಡಪ್ರಭ ವಾರ್ತೆ** ಕುಕನೂರು

ಚಿತ್ರದುರ್ಗದಲ್ಲಿ ಮೇ 9ರಂದು ಬಿ.ಎಸ್.ಯಡಿಯೂರಪ್ಪ ಅವರ 50 ವರ್ಷ ಜನ ಸೇವೆ ಹಿನ್ನೆಲೆಯಲ್ಲಿ ಅಭಿಮಾನೋತ್ಸವ ಬೃಹತ್ ಕಾರ್ಯಕ್ರಮ ನಡೆಯಲಿ ದ್ದು, ಇದು ಬಿ.ಎಸ್ ಯಡಿ ಯೂರಪ್ಪ ರಾಜ್ಯಕ್ಕೆ ನೀಡಿರುವ ಕಳಕಳಿಯ ಕಾರ್ಯದ ಅಭಿಮಾನೋತ್ಸವ ಆಗಿದೆ ಎಂದು ಮಾಜಿ ಸಚಿವ ಹಾಲಪ್ಪ ಆಚಾರ್ ಹೇಳಿದರು.



ತಾಲೂಕಿನ ಮಸಬಹಂಚಿನಾಳ ಗ್ರಾಮದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿತ್ರದುರ್ಗದ ಮಾದರ ಚನ್ನಯ್ಯ ಗುರುಪೀಠದ ಪಕ್ಕದಲ್ಲಿಯೇ ಮೇ.8 ರಂದು ಸಂಜೆ 6ಗಂಟೆಗೆ ವಿವಿಧ ಕಲಾ ತಂಡಗಳಿಂದ ಭವ್ಯ ಮೆರವಣಿಗೆ ಮೂಲಕ ಸ್ವಾಗತಿಸಲಾಗುವುದು. ಮೇ 9ರಂದು ಬೃಹತ್ ಕಾರ್ಯಕ್ರಮ ಬೆಳಗ್ಗೆ 11 ಗಂಟೆಗೆ ನಡೆಯಲಿದ್ದು, ಕೇಂದ್ರ ಗೃಹ ಸಚಿವ ಅಮಿತ್ ಶಾ ಆಗಮಿಸಲಿದ್ದಾರೆ. ಬಿ.ಎಸ್.ಯಡಿಯೂರಪ್ಪ ಬಿಜೆಪಿ ಪಕ್ಷ ಅಸ್ತಿತ್ವಕ್ಕೆ ತಂದವರು. ಅವರ ಶ್ರಮ ಎಂದಿಗೂ ಮರೆಯಲು ಆಗದು. ಈ ಅಭಿಮಾನೋತ್ಸವಅವರಜೀವಮಾನದಲ್ಲಿ ಇದುವರೆಗೂ ಮಾಡಿರುವ ಸಾಮಾಜಿಕ ಕಳಕಳಿಯ ಕಾರ್ಯ ಕೇಳುವುದು ಹಾಗೂ ನೋಡುವುದಕ್ಕೆ ಸಿದ್ಧವಾಗಿದೆ. ಇಡೀ ರಾಜ್ಯದ ಜನ ಧಣಿವರಿಯದ ನಾಯಕನ ಸಾಧನೆಯ ಅಭಿಮಾನೋತ್ಸವ ಮಾಡುತ್ತಿದ್ದಾರೆ ಎಂದರು.

ಯಲಬುರ್ಗಾ ಕ್ಷೇತ್ರದಿಂದ ಬಸ್ ವ್ಯವಸ್ಥೆ ಸಹ ಕಲ್ಪಿಸಲಾಗುವುದು. ಇನ್ನೂ ಸ್ವಯಂ ಪ್ರೇರಣೆಯಿಂದ ಸಾಕಷ್ಟು ಅಭಿಮಾನಿಗಳು ಆಗಮಿಸಲಿದ್ದಾರೆ. ಪಂಚ ರಾಜ್ಯ ಚುನಾವಣೆಯಲ್ಲಿ ಬಿಜೆಪಿಗೆ ಉತ್ತಮ ಸ್ಥಾನಗಳು ದೊರೆತ್ತಿರುವುದು ಬಿಜೆಪಿ ಪಕ್ಷದ ತತ್ವಸಿದ್ಧಾಂತ ಜನ ಮೆಚ್ಚಿರುವುದರ ಸಂಕೇತವಾಗಿದೆ. ಹಿಂದಿನ ಕಾಂಗ್ರೆಸ್ ಸರ್ಕಾರ ಭಾರತಕ್ಕೆ ಶಕ್ತಿ ನೀಡಲಿಲ್ಲ. ಬರೀಅಧಿಕಾರದಾಹದಲ್ಲಿತ್ತು. ಪ್ರಧಾನಿ ನರೇಂದ್ರ ಮೋದಿ ಅಧಿಕಾರಕ್ಕೆ ಬಂದ ನಂತರ ಇಡೀ ವಿಶ್ವವೇ ಭಾರತವನ್ನು ವಿಶ್ವಗುರುವನ್ನಾಗಿಸಿಕೊಂಡಿದೆ. ರಾಜ್ಯದಲ್ಲೂ ಸಹ ಬಿಎಸ್‌ವೈ ಉತ್ತಮ ಆಡಳಿತ ನೀಡಿದರು. ಅವರಿಂದ ಕರ್ನಾಟಕ ಬೆಳಕಾಯಿತು. ಬಿ.ಎಸ್.ಯಡಿಯೂರಪ್ಪ ರಾಜ್ಯ ಕಂಡ ಧಿಮಂತ ನಾಯಕರಾಗಿದ್ದು, ನಾಲ್ಕು ಬಾರಿ ಸಿಎಂ ಆಗಿದ್ದಾರೆ. ಅವರು ಪುರಸಭೆಯಿಂದ ಆಯ್ಕೆಗೊಳ್ಳುವ ಮೂಲಕ ರಾಜ್ಯದ ಮುಖ್ಯಮಂತ್ರಿ ಸ್ಥಾನ ಪಡೆದಿದ್ದಾರೆ. ಅವರು ಹುಟ್ಟು ಹೋರಾಟಗಾರರು. ಅವರ ಹೋರಾಟ ಇಂದಿನ ಯುವ ಜನತೆಗೆ ಮಾರ್ಗದರ್ಶನವಾಗಲಿದೆ ಎಂದರು. ರಾಜ್ಯ ಕಾಂಗ್ರೆಸ್ ಕೇವಲ ಅಧಿಕಾರಕ್ಕೆ ಕೆಲಸ ಮಾಡುತ್ತಿದ್ದು, ಅಭಿವೃದ್ಧಿ ಮಾತ್ರ ಇಲ್ಲ. ಇಂತಹ ಸರ್ಕಾರದಿಂದ ಯಾವುದೇ ಅಭಿವೃದ್ಧಿ ನಿರೀಕ್ಷೆ ಮಾಡುವುದು ಕಷ್ಟವಾಗಿದೆ. ಅಭಿವೃದ್ಧಿಯ ದೃಷ್ಟಿ ಕೋನವಿಲ್ಲ. ಕ್ಷೇತ್ರದಲ್ಲಿ ಈ ಹಿಂದಿನ ಬಿಜೆಪಿ ಸರ್ಕಾರ ಅವಧಿಯಲ್ಲಿ ಹಲವು ಯೋಜನೆ ಜಾರಿಗೊಳಿಸಿದ್ದು, ಅವುಗಳನ್ನು ಪೂರ್ಣಗೊಳಿಸುತ್ತಿಲ್ಲ. ಈ ಕಾಂಗ್ರೆಸ್ ಸರ್ಕಾರ ದಿವಾಳಿಯತ್ತ ಸಾಗುತ್ತಿದೆ ಎಂದರು. ಬಿಜೆಪಿ ಮಂಡಲ ಅಧ್ಯಕ್ಷ ಮಾರುತಿ ಗಾವರಾಳ, ಮಾಜಿ ತಾಪಂ ಉಪಾಧ್ಯಕ್ಷ ಶಿವಕುಮಾರ ನಾಗಲಾಪುರಮಠ, ಪಪಂ ಸದಸ್ಯರಾದ ಸಿದ್ದು ಉಳ್ಳಾಗಡ್ಡಿ, ಬಾಲರಾಜ ಗಾಳಿ, ಶಿವರಾಜಗೌಡ ಯಲ್ಲಪ್ಪಗೌಡ್ರ, ಶರಣಪ್ಪ ಬಣ್ಣದಬಾವಿ, ಮಹಾಂತೇಶ ಹೂಗಾರ, ಮಂಜುನಾಥ ಮಾಲಗಿತ್ತಿ, ವೀರೇಶ ಸಬರದ ಇತರರಿದ್ದರು.

> ರಾಜ್ಯ ಕಾಂಗ್ರೆಸ್ ಕೇವಲ ಅಧಿಕಾರಕ್ಕೆ ಕೆಲಸ ಮಾಡುತ್ತಿದ್ದು, ಅಭಿವೃದ್ಧಿ ಮಾತ್ರ ಇಲ್ಲ. ಇಂತಹ ಸರ್ಕಾರದಿಂದ ಯಾವುದೇ ಅಭಿವೃದ್ಧಿ ನಿರೀಕ್ಷೆ ಮಾಡುವುದು ಕಷ್ಟವಾಗಿದೆ. ಅಭಿವೃದ್ಧಿಯ ದೃಷ್ಟಿ ಕೋನವಿಲ್ಲ. ಕ್ಷೇತ್ರದಲ್ಲಿ ಈ ಹಿಂದಿನ ಬಿಜೆಪಿ ಸರ್ಕಾರ ಅವಧಿಯಲ್ಲಿ ಹಲವು ಯೋಜನೆ ಜಾರಿಗೊಳಿಸಿದ್ದು, ಅವುಗಳನ್ನು ಪೂರ್ಣಗೊಳಿಸುತ್ತಿಲ್ಲ. ಈ ಕಾಂಗ್ರೆಸ್ ಸರ್ಕಾರ ದಿವಾಳಿಯತ್ತ ಸಾಗುತ್ತಿದೆ.
>
> • **ಹಾಲಪ್ಪ ಆಚಾರ್,** ಮಾಜಿ ಸಚಿವರು

10ರಂದು ಹೇಮರೆಡ್ಡಿ ಮಲ್ಲಮ್ಮ ಜಯಂತಿ

ಗಂಗಾವತಿ: ಅಖಂಡ ಗಂಗಾವತಿ ತಾಲೂಕಿನ ಎಲ್ಲ ಶಾಲೆಗಳಲ್ಲಿ ಮೇ 10 ರಂದು ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಿಸಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಸೂಚಿಸಿದ್ದಾರೆ.ಈ ಕುರಿತು ಪ್ರಕಟಣೆ ನೀಡಿರುವ ಅವರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕರ ಸೂಚನೆ ಮೇರೆಗೆ ಎಲ್ಲ ಸರ್ಕಾರಿ,ಅನುದಾನ ರಹಿತ ವಸತಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಜಯಂತಿ ಆಚರಿಸಬೇಕೆಂದು ಸೂಚಿಸಿದ್ದಾರೆ.

ಲವ್ ಜಿಹಾದ್ ಆರೋಪ, ಮುಸ್ಲಿಂ ಯುವಕನ ಥಳಿತ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಅಪ್ರಾಪ್ತೆಯೊಂದಿಗೆ ಲವ್ವಿಡವ್ವಿ ನಡೆಸುತ್ತಿದ್ದಾನೆ ಎಂದು ಆರೋಪಿಸಿ ಮುಸ್ಲಿಂ ಯುವಕನೋರ್ವನನ್ನು ಹಿಂದುಪರ ಸಂಘಟನೆಗಳ ಯುವಕರು ಥಳಿಸಿದ ಘಟನೆ ನಗರದಲ್ಲಿ ನಡೆದಿದೆ.

ಹಲ್ಲೆಯಿಂದ ಗಾಯಗೊಂಡಿರುವ ನಗರದ ನಿರ್ಮಿತಿ ಕೇಂದ್ರ ವ್ಯಾಪ್ತಿಯ ಸಮೀರ್‌ಈಗ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ. ಹಲ್ಲೆ ಮಾಡಿದ 8 ಆರೋಪಿಗಳನ್ನು ಪೊಲೀಸರು ವಶಕ್ಕೆ ಪಡೆದು ತನಿಖೆ ನಡೆಸುತ್ತಿದ್ದಾರೆ. ಈ ಮಧ್ಯೆ, ಬಿಜೆಪಿ ನಾಯಕರು ಕೊಪ್ಪಳ ನಗರ ಠಾಣೆಗೆ ಭೇಟಿ ನೀಡಿ, ಪೋಕ್ಸೋಪ್ರಕರಣದಾಖಲುಮಾಡಿಆರೋಪಿಯನ್ನು ಜೈಲಿಗಟ್ಟುವಂತೆ ಆಗ್ರಹಿಸಿದ್ದಾರೆ.ಪೋಕ್ಸೋ ಪ್ರಕರಣ ದಲ್ಲಿನ ಆರೋಪಿಯನ್ನು ಬಂಧಿಸುವುದನ್ನು ಬಿಟ್ಟು, ಪೊಲೀಸರು ಅಪ್ರಾಪ್ತೆಯನ್ನು ರಕ್ಷಣೆ ಮಾಡಿದವರ ಮೇಲೆಯೇ ಕೇಸ್ ದಾಖಲಿಸಿರುವುದು ಯಾವ ನ್ಯಾಯ ಎಂದು ಪ್ರಶ್ನೆ ಮಾಡಿದ್ದಾರೆ.

ಆಗಿದ್ದೇನು: ಅಪ್ರಾಪ್ತೆಯೊಂದಿಗೆ ಸಮೀರ್‌ಎನ್ನುವ ಯುವಕಸುತ್ತಾಡುವುದನ್ನುಹಿಂದುಪರಸಂಘಟನೆಗಳ ಯುವಕರು ಕಳೆದ ಕೆಲ ದಿನಗಳಿಂದ ನೋಡಿದ್ದರು. ಬುಧವಾರ ಕೊಪ್ಪಳ ನಗರದ ಕೆಫೆಯೊಂದರಲ್ಲಿ ಕುಳಿತಿರುವಾಗಲೇ ಪ್ರಶ್ನೆ ಮಾಡಿದ್ದಾರೆ. ಆಗ ಮಾತಿಗೆ ಮಾತು ಬೆಳೆದು ಪರಸ್ಪರ ವಾಗ್ವಾದವಾಗಿದೆ. ಈ ವೇಳೆಯಲ್ಲಿಸಮೀರ್‌ನನ್ನು ಥಳಿಸಿದ್ದಾರೆ ಎನ್ನಲಾಗಿದೆ. ಇದರಿಂದ ಕೆರಳಿದ ಮುಸ್ಲಿಂ ಯುವಕರ ಗುಂಪು ಕೊಪ್ಪಳ ನಗರ ಠಾಣೆಯ ಮುಂದೆ ಜಮಾಯಿಸಿ ಆರೋಪಿಗಳನ್ನು ಬಂಧಿಸುವಂತೆ ಆಗ್ರಹಿಸಿದ್ದಾರೆ.

ಕೇಸ್ ದಾಖಲಿಸಲು ಆಗ್ರಹ

ಘಟನೆಯಕುರಿತುಮಾಹಿತಿ ತಿಳಿದು ನಗರಠಾಣೆಗೆ ಗುರುವಾರ ಬೆಳಗ್ಗೆ ಆಗಮಿಸಿದ ಹಿಂದುಪರ ಸಂಘಟನೆಗಳ ಮುಖಂಡರು, ನಾಯಕರು, ಬಿಜೆಪಿ ನಾಯಕರು ಎಸ್ಪಿ ಡಾ. ರಾಮ ಎಲ್ ಅರಸಿದ್ದಿಗೆ ಮನವಿ ಸಲ್ಲಿಸಿ ಪೋಕ್ಸೋ ಪ್ರಕರಣ ದಾಖಲು ಮಾಡಿ ಆರೋಪಿ ಸಮೀರ್‌ನನ್ನು ಬಂಧಿಸುವಂತೆ ಆಗ್ರಹಿಸಿದ್ದಾರೆ.

ಅಪ್ರಾಪ್ತೆಯ ಪಾಲಕರು ದೂರು ನೀಡುವವರೆಗೂ ಕಾಯದೆ ಸ್ವಯಂ ದೂರು ದಾಖಲಿಸುವಂತೆ ಆಗ್ರಹಿಸಿದರು. ಆದರೆ, ಎಸ್ಪಿ ಡಾ. ರಾಮ ಎಲ್ ಅರಸಿದ್ದಿ ಪಾಲಕರು ದೂರು ನೀಡಿದರೆ ಖಂಡಿತ ಪ್ರಕರಣ ದಾಖಲು ಮಾಡಿ ಕಾನೂನು ರೀತಿಯಲ್ಲಿ ಕ್ರಮ ವಹಿಸಲಾಗುವುದು ಎಂದರು.ಆರೋಪಿ ಸಮೀರ್‌ಮೊಬೈಲ್ ನಲ್ಲಿ ಸಾಕಷ್ಟು ದಾಖಲೆಗಳು ಇವೆ. ಇವುಗಳ ಆಧಾರ ದಲ್ಲಿ ಆರೋಪಿ ಸಮೀರ್‌ಬಂಧಿಸುವಂತೆ ಆಗ್ರಹಿಸಿದ್ದಾರೆ. ಈ ಸಂದರ್ಭದಲ್ಲಿ ವಿಪ ಸದಸ್ಯೆ ಹೇಮಲತಾ ನಾಯಕ, ಬಿಜೆಪಿ ಜಿಲ್ಲಾಧ್ಯಕ್ಷ ನವೀನ್ ಗುಳಗಣ್ಣವರ, ಡಾ. ಬಸವರಾಜ ಕ್ಯಾವಟರ್ ಸೇರಿದಂತೆ ಅನೇಕರು ಇದ್ದರು.

ಘಟನೆಯ ಗಂಭೀರತೆ ಅರಿತ ಪೊಲೀಸರು ರಾತ್ರಿಯೇ ಕಾರ್ಯಾಚರಣೆ ನಡೆಸಿ ಕೆಫೆಯಲ್ಲಿನ ಸಿಸಿಟಿವಿ ಫುಟೇಜ್ ಆಧರಿಸಿ, ಹಲ್ಲೆ ಮಾಡಿದ್ದಾರೆ ಎನ್ನುವ ಆರೋಪದಡಿ 8 ಜನರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

ಅಭಿಮಾನೋತ್ಸವಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ



ಬಿಜೆಪಿ ಅಂಜನಾದ್ರಿ ಕಾರ್ಯಾಲಯದಲ್ಲಿ ಶಾಸಕ ದೊಡ್ಡನಗೌಡ ಸುದ್ದಿಗೋಷ್ಟಿಯಲ್ಲಿ ಮಾತನಾಡಿದರು.

• **ಕನ್ನಡಪ್ರಭ ವಾರ್ತೆ** ಕುಷ್ಟಗಿ

ಮೇ 9ರಂದು ಚಿತ್ರದುರ್ಗದ ಮಾದರ ಚನ್ನಯ್ಯ ಗುರುಪೀಠದ ಪಕ್ಕದಲ್ಲಿ ನಡೆಯುವ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಅಭಿಮಾನೋತ್ಸವಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಅಭಿಮಾನಿಗಳು ಹಾಗೂ ಪಕ್ಷದ ಕಾರ್ಯಕರ್ತರು ಆಗಮಿಸಬೇಕು ಎಂದು ಶಾಸಕ ದೊಡ್ಡನಗೌಡ ಪಾಟೀಲ ಕರೆ ನೀಡಿದರು.

ಪಟ್ಟಣದ ಶಾಖಾಪುರ ರಸ್ತೆಯಲ್ಲಿರುವ ಬಿಜೆಪಿಪಕ್ಷದಅಂಜನಾದ್ರಿಕಾರ್ಯಾಲಯದಲ್ಲಿ ಸುದ್ದಿಗೋಷ್ಟಿ ನಡೆಸಿ ಮಾತನಾಡಿದರು.

ಹೋರಾಟದ ಮೂಲಕ ರಾಜಕಾರಣದಲ್ಲಿ ಛಾಪು ಮೂಡಿಸಿದ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪನವರ 50 ವರ್ಷಗಳ ಜನ ಸೇವೆಯ ಹಿನ್ನೆಲೆಯಲ್ಲಿ ಅಭಿಮಾನೋತ್ಸವ ಬೃಹತ್‌ಕಾರ್ಯಕ್ರಮನಡೆಯಲಿದೆಎಂದರು. ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಕುಷ್ಟಗಿ ವಿಧಾನಸಭಾ ಕ್ಷೇತ್ರದಲ್ಲಿನ ಯಡಿಯೂರಪ್ಪನವರಅಭಿಮಾನಿಗಳು, ಪಕ್ಷದಹಿರಿಯರು, ಮುಖಂಡರು, ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ತಿಳಿಸಿದರು.ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಮಹಾಂತೇಶ ಬಾದಾಮಿ, ಯುವ ಮೋರ್ಚಾ ಅಧ್ಯಕ್ಷ ಉಮೇಶ ಯಾದವ, ಕೆ.ಮಹೇಶ, ಶಶಿಧರ ಕವಲಿ, ಮಲ್ಲಣ್ಣ ಪಲ್ಲೇದ, ಅಶೋಕ ಬಳೂಟಗಿ, ಲಾಡಸಾಬ್ ಕೊಳ್ಳಿ, ಪ್ರಕಾಶಗೌಡ ಬೆದವಟ್ಟಿ, ಶುಖಮುನಿ ಗುರುವಿನ, ವಿಠ್ಠಪ್ಪ ಚಳಗೇರಿ, ಸುರೇಶ ಹುನಗುಂದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಉಪಚುನಾವಣೆಯಲ್ಲಿ ಆಡಳಿತ ಪಕ್ಷಕ್ಕೆ ಮಣೆ: ಶಾಸಕ ದೊಡ್ಡನಗೌಡ ಪಾಟೀಲ

ಕುಷ್ಟಗಿ: ದಾವಣಗೆರೆ ಮತ್ತು ಬಾಗಲಕೋಟೆ ಉಪಚುನಾವಣೆಯಲ್ಲಿ ಮತದಾರರು ಆಡಳಿತ ಪಕ್ಷಕ್ಕೆ ಮಣೆ ಹಾಕಿದ್ದಾರೆ ಎಂದು ಶಾಸಕ ದೊಡ್ಡನಗೌಡ ಪಾಟೀಲ ಹೇಳಿದರು.ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಾಗಲಕೋಟೆಯ ಉಪಚುನಾವಣೆಯಲ್ಲಿ ಕಾಂಗ್ರೇಸ್ಸಿನವರು ನೂರು ಕೋಟಿಗೂ ಅಧಿಕ ಹಣ ಖರ್ಚು ಮಾಡುವ ಮೂಲಕ ಗೆಲುವು ಸಾಧಿಸಿದ್ದಾರೆ ಎಂಬ ಮಾಹಿತಿ ಮಾಧ್ಯಮದವರೆ ತೋರಿಸಿದ್ದಾರೆ. ದಾವಣಗೆರೆಯಲ್ಲಿ ಗೆಲ್ಲುತ್ತೇವೆ ಎಂಬ ಆಶಾಭಾವನೆಯಿತ್ತು, ಆದರೆ ಮತದಾರರು ಆಡಳಿತ ಪಕ್ಷಕ್ಕೆ ಮಣೆ ಹಾಕಿದ್ದಾರೆ ಎಂದರು. ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರನ್ನು ಬಿಜೆಪಿಗೆ ಸೇರ್ಪಡೆ ಮಾಡಿಕೊಳ್ಳುವದು ಹೈಕಮಾಂಡ್ ಗೆ ಬಿಟ್ಟಿರುವ ವಿಷಯವಾಗಿದೆ, ನಮ್ಮ ಪಕ್ಷದ ಹಿರಿಯರು ಪಕ್ಷದ ನಾಯಕರಲ್ಲಿರುವ ಕೆಲ ಸಣ್ಣಪುಟ್ಟ ಗೊಂದಲ ಸರಿಪಡಿಸದೆ ಇದ್ದಲ್ಲಿ ಮುಂದಿನ ಚುನಾವಣೆಗಳಲ್ಲಿ ತೊಂದರೆ ಬರಬಹುದು ಎಂಬ ಆತಂಕ ನಮ್ಮೆಲ್ಲರಲ್ಲೂ ಇದೆ ಎಂದರು.